ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು –೮೧

**ಪಟ್ಟಿ – ೧೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ : ೦೪ ನೇ ಜುಲೈ, ೨೦೧೬.**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೬. ವೈದ್ಯಕೀಯ ಶಿಕ್ಷಣ ಸಚಿವರು.

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

## ಚಿತ್ರಕಲಾ ಶಿಕ್ಷಕರ ನೇಮಕಾತಿ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೧೧ (೧೫೭೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಯಾವಾಗ ಅಧಿಸೂಚನೆ ಹೊರಡಿಸಲಾಗಿದೆ ;

(ಆ) ಹಾಗಿದ್ದಲ್ಲಿ, ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದರೆ ಎಷ್ಟು ಜನ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ; ನೇಮಕಾತಿ ಪ್ರಕ್ರಿಯೆ ಕುರಿತು ಮಾಹಿತಿ ನೀಡುವುದು ;

(ಇ) ಇಲ್ಲದಿದ್ದಲ್ಲಿ, ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಇರುವ ಗೊಂದಲಗಳೇನು ; ಪರಿಹಾರಕ್ಕೆ ತೆಗೆದುಕೊಂಡ ಕ್ರಮಗಳೇನು ?

## ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೧೨ (೧೫೭೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಮೊರಾರ್ಜಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಿಗೆ ಒದಗಿಸಿರುವ ಕಟ್ಟಡ, ಮೂಲಭೂತ ಸೌಕರ್ಯ, ಸಿಬ್ಬಂದಿ, ಸಿ.ಸಿ. ಕ್ಯಾಮರಾ ಅಳವಡಿಕೆ ಕುರಿತು ಪ್ರತಿ ಶಾಲಾವಾರು ವಿವರ ನೀಡುವುದು ;

(ಆ) ಕಳೆದ ೦೨ ವರ್ಷಗಳಿಂದ ಪ್ರತಿ ಶಾಲೆಗೆ ನೀಡಿರುವ ನಿರ್ವಹಣಾ ಅನುದಾನ ಎಷ್ಟು ; ಅಭಿವೃದ್ಧಿ ಅನುದಾನ ಎಷ್ಟು ; ಕೈಗೊಂಡಿರುವ ದುರಸ್ಥಿ ಕಾರ್ಯಗಳು ಯಾವುವು ? (ಪ್ರತಿ ಶಾಲಾವಾರು ವಿವರ ನೀಡುವುದು)

## ಕ್ರೈಸ್ ಅನ್ನು ಪ್ರತ್ಯೇಕ ನಿರ್ದೇಶನಾಲಯ ಮಾಡುವ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೧೩ (೧೫೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕ್ರೈಸ್‌ನ್ನು (ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯನ್ನು) ಪ್ರತ್ಯೇಕ ನಿರ್ದೇಶನಾಲಯವನ್ನಾಗಿ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು ;

(ಇ) ಇದರಿಂದ ಶಿಕ್ಷಕ/ಸಿಬ್ಬಂದಿಗಳ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಸಿಗುತ್ತದೆಯೆಂಬುದನ್ನು ಸರ್ಕಾರ ಮನಗೊಂಡಿದೆಯೇ ?

## ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿನ ಸಿಬ್ಬಂದಿಗಳ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೧೫೧೪ (೧೫೭೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೊರಾರ್ಜಿ ಹಾಗೂ ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿನ ಬೋಧಕ ಹಾಗೂ ಬೋಧಕೇತರರ ಸಂಖ್ಯೆ ಎಷ್ಟು ; ಸೃಷ್ಟಿಯಾದ ಹುದ್ದೆಗಳ ಸಂಖ್ಯೆ ಎಷ್ಟು ; ಅಗತ್ಯವಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಶಾಲೆಗಳಲ್ಲಿ ಅಗತ್ಯ ಸಿಬ್ಬಂದಿಗಳು ಇರದೇ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಎಷ್ಟು ಶಾಲೆಗಳಲ್ಲಿ ಶಿಕ್ಷಕರುಗಳ ಕೊರತೆ ಇದೆ ; (ಪಟ್ಟಿ ನೀಡುವುದು)

(ಈ) ಈ ಶಾಲೆಗಳಿಗೆ ಅಗತ್ಯವಿರುವ ಶಿಕ್ಷಕರುಗಳ ನೇಮಕಾತಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದೇ ?

## ಮಂಡ್ಯ ಜಿಲ್ಲೆಯಲ್ಲಿನ H.I.V. (ಏಡ್ಸ್) ಪ್ರಕರಣಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೧೫ (೧೫೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ವರದಿಯಾಗಿರುವ ಭಯಾನಕ ರೋಗವಾದ (ಏಡ್ಸ್) ಹೆಚ್.ಐ.ವಿ. ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪುರುಷರು, ಸ್ತ್ರೀಯರು ಮತ್ತು ಮಕ್ಕಳ ತಲಾ ಸಂಖ್ಯೆ ಎಷ್ಟು ; ಆ ಪೈಕಿ ಮೃತಪಟ್ಟ ರೋಗಿಗಳ ಸಂಖ್ಯೆ ಎಷ್ಟು ; ಚಿಕಿತ್ಸೆ ಪಡಯುತ್ತಿರುವವರ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯಲ್ಲಿರುವ ಹೆಚ್.ಐ.ವಿ. ಚಿಕಿತ್ಸಾ ಘಟಕ ಅಥವಾ ಕೇಂದ್ರಗಳ ಸಂಖ್ಯೆ ಎಷ್ಟು ; ಹೆಚ್.ಐ.ವಿ. ರೋಗಿಗಳ ಪುನರ್‌ವಸತಿ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕರ್ನಾಟಕ ಏಡ್ಸ್ ನಿಯಂತ್ರಣ ಸೊಸೈಟಿಯ ನೌಕರರ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸಿದೆಯೇ ? (ವಿವರ ನೀಡುವುದು)

# ಮಂಡ್ಯ ಜಿಲ್ಲೆಯಲ್ಲಿನ A.P.L., B.P.L. ಮತ್ತು ಅಂತ್ಯೋದಯ ಕಾರ್ಡ್‌ಗಳು

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೧೬ (೧೫೯೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕುಟುಂಬಗಳಿಗೆ ಎ.ಪಿ.ಎಲ್., ಬಿ.ಪಿ.ಎಲ್. ಮತ್ತು ಅಂತ್ಯೋದಯ ಕಾರ್ಡ್‌ಗಳನ್ನು ವಿತರಿಸಲಾಗಿದೆ; ವಿತರಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಸ್ತುತ ಸರ್ಕಾರದಿಂದ ಮೇ–೨೦೧೬ರ ಅಂತ್ಯದವರೆಗೆ ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ; ಹಾಗಿದ್ದಲ್ಲಿ ಕಾರಣಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಿ.ಪಿ.ಎಲ್ ಕಾರ್ಡ್ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ನ್ಯಾಯಬೆಲೆ ಅಂಗಡಿಗಳಿವೆ ; ಎಷ್ಟು ಸೀಮೆಎಣ್ಣೆ ವಿತರಕರಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ನ್ಯಾಯಬೆಲೆ ಮತ್ತು ಸೀಮೆಎಣ್ಣೆ ವಿತರಕರುಗಳಿಂದ ಸಮರ್ಪಕವಾಗಿ ವಿತರಣೆಯಾಗದೇ ಇರುವ ಬಗ್ಗೆ ದೂರುಗಳು ಬಂದಿವೆಯೇ ; ಹಾಗಿದ್ದಲ್ಲಿ, ಕಾರಣಗಳೇನು ? (ಮಾಹಿತಿ ನೀಡುವುದು)

## ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೧೫೧೭ (೧೫೯೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ನಿಗದಿಪಡಿಸಿದ, ಬಿಡುಗಡೆ ಮಾಡಿದ ಮತ್ತು ಖರ್ಚಾದ ಅನುದಾನದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಗಂಗಕಲ್ಯಾಣ ಯೋಜನೆಯಡಿ ವೈಯಕ್ತಿಕ ಹಾಗೂ ಸಾಮೂಹಿಕ ಬಾವಿ/ಕೊಳವೆಬಾವಿ/ಪಂಪ್‌ಸೆಟ್ ಅಳವಡಿಕೆಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ಆಯ್ಕೆಯಾದ ಫಲಾನುಭವಿಗಳಿಗೆ ಸೌಲಭ್ಯವನ್ನು ಒದಗಿಸಲಾಗಿದೆಯೇ, ಹಾಗಿದ್ದಲ್ಲಿ ಕಾರಣವೇನು ; (ತಾಲ್ಲೂಕುವಾರು ಫಲಾನುಭವಿಗಳ ವಿವರ ನೀಡುವುದು)

(ಈ) ನೀಡದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು. ತಪ್ಪಿತಸ್ಥರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಮಾಹಿತಿ ತಂತ್ರಜ್ಞಾನ ಕಂಪನಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೧೫೧೮ (೧೫೯೦) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇದುವರೆವಿಗೂ ಎಷ್ಟು ಮಾಹಿತಿ ತಂತ್ರಜ್ಞಾನಗಳ ಕಂಪನಿಗಳು ಕಾರ್ಯನಿರ್ವಹಿಸುತ್ತಿವೆ ; (ನಗರವಾರು ವಿವರ ನೀಡುವುದು)

(ಆ) ಮಾಹಿತಿ ತಂತ್ರಜ್ಞಾನ ಕಂಪನಿಗಳಿಗೆ ಸರ್ಕಾರದಿಂದ ನೀಡಲಾಗುವ ಸೌಲಭ್ಯಗಳೇನು, ಪ್ರತಿಯಾಗಿ ಸರ್ಕಾರಕ್ಕೆ ಆಗುತ್ತಿರುವ ಲಾಭವೇನು; (ವಿವರ ನೀಡುವುದು)

(ಇ) ಈ ಕಂಪನಿಗಳಲ್ಲಿ ಕೆಲಸ ಮಾಡುತ್ತಿರುವ ಮಾಹಿತಿ ತಂತ್ರಜ್ಞಾನರ ಸಂಖ್ಯೆ ಎಷ್ಟು ;

(ಈ) ಈ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಯಾವ ಮಾನದಂಡ ಅನುಸರಿಸಲಾಗುತ್ತಿದೆ ; (ವಿವರ ನೀಡುವುದು)

(ಉ) ಈ ಕಂಪನಿಗಳಲ್ಲಿ ಕನ್ನಡಿಗರಿಗೂ ಅದರಲ್ಲೂ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಲ್ಲಿ ನೇಮಕಾತಿಯಲ್ಲಿ ಆದ್ಯತೆ ನೀಡಲಾಗಿದೆಯೇ ? (ವಿವರ ನೀಡುವುದು)

## ಔಷಧಿಗಳ ದರ ಇಳಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೧೫೯೯ (೧೫೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಔಷಧಿಗಳ ದರ ಇಳಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದರ ಇಳಿಕೆಯ ದಿನಾಂಕದೊಂದಿಗೆ ಮಾಹಿತಿ ನೀಡುವುದು ;

(ಆ) ದರ ಇಳಿಕೆಯಾಗಿರುವ ಔಷಧಿಗಳು ಯಾವುವು ; ಅವುಗಳ ಹೆಸರಿನೊಂದಿಗೆ ದರಪಟ್ಟಿ ನೀಡುವುದು ;

(ಇ) ಸಕ್ಕರೆ ಖಾಯಿಲೆ ಬಗ್ಗೆ ಸರ್ಕಾರ ಕಾಳಜಿ ವಹಿಸಿದೆಯೇ ; ಹಾಗಿದ್ದಲ್ಲಿ, ಯಾವ ಕ್ರಮ ವಹಿಸಲಾಗಿದೆ ; (ವಿವರ ನೀಡುವುದು)

(ಈ) ಸಕ್ಕರೆ ಖಾಯಿಲೆಗೆ ಇರುವ ಗುಣಮಟ್ಟದ ಔಷಧಿಗಳಾವುವು, ಇದನ್ನು ಜನರ ಕೈಗೆಟಕುವ ದರದಲ್ಲಿ ವಿತರಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ; (ವಿವರ ನೀಡುವುದು)

(ಉ) ರಾಜ್ಯದ ಔಷಧಿ ಅಂಗಡಿಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸರ್ಕಾರದಿಂದ ಇಳಿಕೆಯಾಗಿರುವ ಔಷಧಿಗಳ ದರಪಟ್ಟಿಯ ಬೋರ್ಡ್‌ನ್ನು ಹಾಕುವಂತೆ ಸರ್ಕಾರ ನಿರ್ದೇಶನ ನೀಡಲು ಕ್ರಮಕೈಗೊಳ್ಳುವುದೇ ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿರುವ ವಿಜ್ಞಾನ ಕೇಂದ್ರಗಳು ಹಾಗೂ ಕಟ್ಟಡಗಳು ಮತ್ತು ಅನುದಾನದ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೫೨೦ (೧೬೧೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಇರುವ ಒಟ್ಟು ವಿಜ್ಞಾನ ಕೇಂದ್ರಗಳು ಎಷ್ಟು ; ಸದರಿ ವಿಜ್ಞಾನ ಕೇಂದ್ರಗಳ ಪೈಕಿ ಸ್ವಂತ ಕಟ್ಟಡವನ್ನು ಹೊಂದಿರುವ ವಿಜ್ಞಾನ ಕೇಂದ್ರಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ವಿಜ್ಞಾನ ಕೇಂದ್ರಗಳಿಗೆ ಸರ್ಕಾರದಿಂದ ಕಳೆದ ೧೦ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಸದರಿ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾರ್ಯಕ್ಕಾಗಿ ಬಳಸಲಾಗಿರುತ್ತದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕಲಾವಿದರಿಗೆ ಮಾಶಾಸನ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೫೨೧ (೧೬೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ಆರು ಜಿಲ್ಲೆಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರತಿ ತಿಂಗಳು ಮಾಶಾಸನ ಪಡೆಯುತ್ತಿರುವ ಒಟ್ಟು ಕಲಾವಿದರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕಲಾವಿದರ ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಲಾಖೆಯಿಂದ ಕಲಾವಿದರಿಗೆ ಮಾಶಾಸನ ಮಂಜೂರು ಮಾಡಲು ಇರುವ ಮಾನದಂಡಗಳೇನು ; ಪ್ರತಿ ತಿಂಗಳು ಮಂಜೂರಾದ ಮಾಶಾಸನದ ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಲಾವಿದರಿಗೆ ಮಾಶಾಸನ ಹೊರತುಪಡಿಸಿ ಇರುವ ಸರ್ಕಾರದ ಇತರೆ ಯೋಜನೆಗಳಾವುವು ? (ಯೋಜನಾವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯಕ್ಕೆ ಹಾಗೂ ಹೈದ್ರಾಬಾದ್–ಕರ್ನಾಟಕ ಭಾಗಕ್ಕೆ ಬಿಡುಗಡೆಯಾಗಿರುವ ಅನುದಾನ ಹಾಗೂ ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೫೨೨ (೧೬೧೨) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ಅಭಿವೃದ್ಧಿಗೆ ೨೦೧೪–೧೫, ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಪ್ರಸ್ತುತ ಸರ್ಕಾರದ ಮುಂದಿರುವ ನೂತನ ಅಭಿವೃದ್ಧಿ ಯೋಜನೆಗಳಾವುವು ; (ವಿವರ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕಿನಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಹಮ್ಮಿಕೊಂಡಿರುವ ಯೋಜನೆಗಳು, ಗುರಿ ಮತ್ತು ಸಾಧನೆಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಸದರಿ ಇಲಾಖೆಗಳಿಂದ ಕಳೆದ ಮೂರು ವರ್ಷಗಳಲ್ಲಿ ಮೀಸಲಿಟ್ಟ ಅನುದಾನವೆಷ್ಟು ; ಈ ಅನುದಾನದಲ್ಲಿ ಸದ್ಬಳಕೆಯಾದ ಅನುದಾನವೆಷ್ಟು ; ಉಳಿದ ಅನುದಾನವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸ್ವಯಂ ಉದ್ಯೋಗ ಯೋಜನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೫೨೩ (೧೬೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹೈದ್ರಾಬಾದ್–ಕರ್ನಾಟಕ ಭಾಗದ ಆರು ಜಿಲ್ಲೆಗಳಲ್ಲಿ ಸ್ವಯಂ ಉದ್ಯೋಗಕ್ಕಾಗಿ ಇದುವರೆಗೆ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ಸರ್ಕಾರದಿಂದ ಪ್ರಯೋಜನ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಗಾಗಿ ಸರ್ಕಾರವು ಕಳೆದ ೦೫ ವರ್ಷಗಳಲ್ಲಿ ಮಾಡಿದ ವೆಚ್ಚ ಎಷ್ಟು ? (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೨೪ (೧೫೮೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳು ಯಾವುವು ; ಈ ಜಿಲ್ಲೆಗಳಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ೨೦೧೫–೧೬ನೇ ಸಾಲಿನ ಅನುದಾನದಲ್ಲಿ ವಿಧಾನ ಪರಿಷತ್ ಸದಸ್ಯರುಗಳಿಗೆ ಸಮನಾಗಿ ಹಂಚಿಕೆ ಮಾಡಲಾಗಿದೆಯೇ ; ಒಟ್ಟು ಮಂಜೂರಾದ ಅನುದಾನ ಎಷ್ಟು ; ವಿಧಾನ ಪರಿಷತ್ ಸದಸ್ಯರಿಗೆ ಹಂಚಿಕೆಯಾದ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರುಗಳು ತಮ್ಮ ಕ್ಷೇತ್ರದ ಅಭಿವೃದ್ಧಿಗೆ ಅನುದಾನ ದೊರಕದೆ ವಂಚಿತರಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಅನುದಾನ ನೀಡದೆ ಇರಲು ಕಾರಣವೇನು ;

(ಈ) ಸದರಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರುಗಳಿಗೆ ಸಮನಾಗಿ ಅನುದಾನ ಹಂಚಿಕೆ ಮಾಡುವ ನಿಟ್ಟಿನಲ್ಲಿ ಸರ್ಕಾರದ ಮುಂದಿನ ಕ್ರಮವೇನು ? (ವಿವರವಾದ ಮಾಹಿತಿ ನೀಡುವುದು)

## ಭಾಗ್ಯಲಕ್ಷ್ಮಿ ಯೋಜನೆ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೨೫ (೧೫೮೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೯ನೇ ಸಾಲಿನಲ್ಲಿ ವಿಜಯಪುರ ತಾಲ್ಲೂಕಿನಲ್ಲಿ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಬಾಂಡ್ ದೊರೆಯದೆ ಫಲಾನುಭವಿಗಳು ತೊಂದರೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೦೯ನೇ ಸಾಲಿನಲ್ಲಿ ವಿಜಯಪುರ ತಾಲ್ಲೂಕಿನಲ್ಲಿ ಭಾಗ್ಯಲಕ್ಷ್ಮಿ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; (ಫಲಾನುಭವಿಗಳ ಹೆಸರು ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಇ) ಆಯ್ಕೆಯಾದ ಫಲಾನುಭವಿಗಳಿಗೆ ಎಷ್ಟು ಜನರಿಗೆ ಬಾಂಡ್ ನೀಡಲಾಗಿದೆ ; ಇನ್ನು ಎಷ್ಟು ಜನರಿಗೆ ಬಾಂಡ್ ನೀಡುವುದು ಬಾಕಿ ಉಳಿದಿದೆ ; ವಿಳಂಬಕ್ಕೆ ಕಾರಣವೇನು ; ವಿಳಂಬವಾಗಿರುವುದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣವಾದ ಮಾಹಿತಿ ನೀಡುವುದು)

## ಜನರಿಕ್ ಔಷಧಿ ಮಳಿಗೆಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೨೬ (೧೫೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ದಿನದ ೨೪ ಗಂಟೆ ಔಷಧಿ ಮಳಿಗೆಗಳು ಇಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರದ ಇಚ್ಛೆಯಂತೆ ಜಿಲ್ಲಾ ಆಸ್ಪತ್ರೆಗಳಲ್ಲಿ ಜನರಿಕ್ ಔಷಧಿ ಮಳಿಗೆಗಳಿಂದ ದಿನದ ೨೪ ಗಂಟೆ ಔಷಧಿ ವಿತರಿಸುವ ಯೋಜನೆಯನ್ನು ಸರ್ಕಾರ ಹಾಕಿಕೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಯಾವಾಗ ಈ ಆಸ್ಪತ್ರೆಗಳಲ್ಲಿ ಜನರಿಕ್ ಔಷಧಿ ಮಳಿಗೆಗಳನ್ನು ಪ್ರಾರಂಭಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಜನರಿಕ್ ಔಷಧಿ ಮಳಿಗೆ ಪ್ರಾರಂಭಿಸುವುದನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ ; ಈಗಾಗಲೇ ಯಾವ ಯಾವ ಜಿಲ್ಲೆಗಳಲ್ಲಿ ಜನರಿಕ್ ಔಷಧಿ ಮಳಿಗೆಗಳು ಪ್ರಾರಂಭಗೊಂಡಿವೆ ; ಉಳಿದ ಜಿಲ್ಲೆಗಳಲ್ಲಿ ವಿಳಂಬವಾಗಲು ಕಾರಣವೇನು ; ವಿಳಂಬವಾದ ಜಿಲ್ಲೆಗಳ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆಯಾದ ಹಣ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೨೭ (೧೫೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಹಣ ಎಷ್ಟು ; ಕಲ್ಯಾಣ ಕಾರ್ಯಕ್ರಮಗಳಿಗೆ ಖರ್ಚಾದ ಹಣವೆಷ್ಟು ; ಪರಿಶಿಷ್ಟ ಜಾತಿ, ಪಂಗಡದವರಿಗೆ ವಸತಿ ನಿಲಯಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು ; ಎಷ್ಟು ವಸತಿ ಮನೆ ನಿರ್ಮಾಣ ಮಾಡಲಾಗಿದೆ ; ಖರ್ಚಾದ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗೆ ಗಂಗಕಲ್ಯಾಣ ಯೋಜನೆ ಅಡಿಯಲ್ಲಿ ಕೊರೆದ ಕೊಳವೆಬಾವಿಗಳೆಷ್ಟು ; ಇದರಲ್ಲಿ ಎಷ್ಟು ಕೊಳವೆಬಾವಿಗಳಿಗೆ ವಿದ್ಯುತ್ ಅಳವಡಿಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಇದರ ಫಲಾನುಭವಿಗಳೆಷ್ಟು ; ಕೊಳವೆಬಾವಿ ಹಾಗೂ ವಿದ್ಯುತ್ ಉಪಕರಣಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ಅನುದಾನ ಬಿಡುಗಡೆ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೨೮ (೧೫೮೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ೨೦೧೩–೧೪, ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ಸರ್ಕಾರದಿಂದ ಘೋಷಣೆ ಮಾಡಿದ ಅನುದಾನ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಸದರಿ ಮಂಡಳಿಗಳಿಗೆ ಸರ್ಕಾರದಿಂದ ಮೇಲ್ಕಂಡ ಸಾಲಿಗೆ ವಾಸ್ತವವಾಗಿ ಬಿಡುಗಡೆಯಾದ ಹಣವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಇ) ಸದರಿ ಮಂಡಳಿಯಿಂದ ಅನುಷ್ಠಾನ ಇಲಾಖೆಗೆ ವಾಸ್ತವವಾಗಿ ಬಿಡುಗಡೆಯಾದ ಮೊತ್ತವೆಷ್ಟು ; (ಜಿಲ್ಲಾವಾರು ಅನುಷ್ಠಾನ ಇಲಾಖಾವಾರು ವಿವರ ನೀಡುವುದು)

(ಈ) ಸದರಿ ಮಂಡಳಿಯು ಕಾಮಗಾರಿಗಳಿಗಾಗಿ ಅನುಷ್ಠಾನ ಇಲಾಖೆಯಿಂದ ಬಳಕೆ ಮಾಡಿದ ಅನುದಾನ ಎಷ್ಟು ; (ಜಿಲ್ಲಾವಾರು ಅನುಷ್ಠಾನ, ಇಲಾಖಾವಾರು, ವರ್ಷಾವಾರು ವಿವರ ನೀಡುವುದು)

(ಉ) ಮೇಲ್ಕಂಡ ಸಾಲುಗಳಲ್ಲಿ ಸದರಿ ಮಂಡಳಿಗೆ ಮಂಜೂರಾದ ಕಾಮಗಾರಿಗಳೆಷ್ಟು ; ಆ ಪೈಕಿ ಪೂರ್ಣಗೊಂಡ ಕಾಮಗಾರಿಗಳೆಷ್ಟು; ಪೂರ್ಣಗೊಳ್ಳದ ಕಾಮಗಾರಿಗಳು ಎಷ್ಟು ; ಪೂರ್ಣಗೊಳ್ಳದಿರಲು ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ಕನ್ನಡ ಭಾಷೆಯ ಅಭಿವೃದ್ಧಿಗಾಗಿ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೯ (೧೬೨೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕನ್ನಡ ಭಾಷೆಯ ಅಭಿವೃದ್ಧಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಜಾರಿಗೆ ತರಲು ಪೂರಕವಾಗಿ ಬೇಕಾದ ಪುಸ್ತಕ ಮತ್ತು ಕೈಪಿಡಿಗಳನ್ನು ಸರ್ಕಾರಿ ಕಛೇರಿಗಳಿಗೆ ನೀಡಲಾಗುತ್ತಿದೆಯೇ ;

(ಇ) ಆಡಳಿತದಲ್ಲಿ ಕನ್ನಡವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಯಾವ ಕಾರ್ಯಕ್ರಮ ರೂಪಿಸಲಾಗಿದೆ ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕೊಂಕಣಿ, ಬ್ಯಾರಿ ಅಕಾಡೆಮಿಗಳಿಗೆ ಭವನ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೩೦ (೧೫೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕೊಂಕಣಿ, ಬ್ಯಾರಿ ಅಕಾಡೆಮಿಗಳಿಗೆ ಭವನಗಳನ್ನು ನಿರ್ಮಾಣ ಮಾಡಲು ಅಕಾಡೆಮಿಗಳು ನೀಡಿರುವ ಪ್ರಸ್ತಾವನೆ ಮೇಲೆ ಇಲಾಖೆ ಕ್ರಮ ಕೈಗೊಂಡಿದೆಯೇ ; ಹಾಗಿದ್ದಲ್ಲಿ ಕೈಗೊಂಡ ಕ್ರಮದ ಬಗ್ಗೆ ವಿವರ ನೀಡುವುದು ;

(ಆ) ಕೊಂಕಣಿ ಭಾಷೆಯುನ್ನು ಜನಪ್ರಿಯುಗೊಳಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ; ಪಿ.ಯು.ಸಿ ಮಟ್ಟದಲ್ಲಿ ಕೊಂಕಣಿ ಭಾಷೆ ಕಲಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ ; ಇಲ್ಲದೇ ಇದ್ದಲ್ಲಿ ಕಾರಣ ತಿಳಿಸುವುದು ;

(ಇ) ರಾಜ್ಯದಲ್ಲಿರುವ ಕೊಂಕಣಿ ಭಾಷೆಯನ್ನಾಡುವ ಜನರ ಸಂಖ್ಯೆ ಎಷ್ಟು ; ಯಾವ ಯಾವ ಸಮುದಾಯದವರು ಕೊಂಕಣಿ ಭಾಷೆಯನ್ನು ಮಾತನಾಡುತ್ತಿದ್ದಾರೆ ;

(ಈ) ಅಕಾಡೆಮಿ ಅಧ್ಯಕ್ಷರಿಗೆ ವಾಹನದ ವ್ಯವಸ್ಥೆ ಮತ್ತು ಸದಸ್ಯರಿಗೆ ಗೌರವ ಧನ ಹೆಚ್ಚಿಸಬೇಕೆಂಬ ಬೇಡಿಕೆಗೆ ಇಲಾಖೆ ಕ್ರಮ ಕೈಗೊಳ್ಳದೆ ಇರಲು ಕಾರಣವೇನು ; ಈ ಬಗೆಗಿನ ಪ್ರಸ್ತಾವನೆ ಇಲಾಖೆ ಮುಂದಿದೆಯೇ ? (ವಿವರ ನೀಡುವುದು)

## ಕೊಂಕಣಿ ಸಾಹಿತ್ಯ ಅಕಾಡೆಮಿಗೆ ನೂತನ ಕೊಂಕಣಿ ಭವನ ನಿರ್ಮಾಣದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೩೧ (೧೫೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ನೂತನ ಕೊಂಕಣಿ ಭವನ ನಿರ್ಮಾಣ ಮಾಡಬೇಕೆಂಬ ಪ್ರಸ್ತಾವನೆಗೆ ಇಲಾಖೆ ಕೈಗೊಂಡ ಕ್ರಮವೇನು ;

(ಆ) ಶಾಲಾ–ಕಾಲೇಜುಗಳಲ್ಲಿ ಕೊಂಕಣಿ ಬೋಧನೆಗೆ ಇಲಾಖೆ ನೀಡುತ್ತಿರುವ ಬೆಂಬಲವೇನು ;

(ಇ) ರಾಜ್ಯದಲ್ಲಿ ಎಷ್ಟು ಕೊಂಕಣಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ; ಪ್ರಸ್ತುತ ಎಷ್ಟು ವಿದ್ಯಾರ್ಥಿಗಳು ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದವರೆಗೆ ಕೊಂಕಣಿ ಭಾಷೆಯನ್ನು ಕಲಿಯುತ್ತಿದ್ದಾರೆ ;

(ಈ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಖಾಯಂ ರಿಜಿಸ್ಟ್ರಾರ್‌ರನ್ನು ನೇಮಕ ಮಾಡದೆ ಅಕಾಡೆಮಿಯ ಚಟುವಟಿಕೆಗಳು ಕುಂಠಿತವಾಗುತ್ತಿರುವುದಕ್ಕೆ ಇಲಾಖೆ ತೆಗೆದುಕೊಂಡ ಕ್ರಮವೇನು;

(ಉ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ೨೦೧೪–೧೫ ಮತ್ತು ೨೦೧೫–೧೬ರಲ್ಲಿ ಕೈಗೊಂಡ ಕಾರ್ಯಕ್ರಮಗಳು ಯಾವುವು ; ವಿನಿಯೋಗಿಸಿದ ವೆಚ್ಚ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೩೨ (೧೫೭೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂಬೇಡ್ಕರ್ ಭವನ ನಿರ್ಮಾಣದ ಬಗೆಗಿನ ಪ್ರಸ್ತಾವನೆಯು ಕಾರ್ಯಗತಗೊಳ್ಳದೇ ಇರಲು ಕಾರಣಗಳೇನು ; ಈ ಭವನ ನಿರ್ಮಾಣಕ್ಕಾಗಿ ಮೀಸಲಿಟ್ಟ ಅನುದಾನ ಎಷ್ಟು ;

(ಆ) ಸಮಾಜ ಕಲ್ಯಾಣ ಇಲಾಖಾವತಿಯಿಂದ ಎಷ್ಟು ಸಮುದಾಯ ಭವನಗಳನ್ನು ನಿರ್ಮಾಣ ಮಾಡಲಾಗಿದೆ ; ಇದು ಯಾವ ಹಂತದಲ್ಲಿದೆ ;

(ಇ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಕ್ಕೆ ಸಮುದಾಯದಿಂದ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಈ ಅನುದಾನದ ಮೂಲಕ ಸಮುದಾಯ ಅಭಿವೃದ್ಧಿಗಾಗಿ ಕೈಗೊಂಡ ಕ್ರಮಗಳೇನು ;

(ಈ) ೨೦೧೪–೧೫ ಮತ್ತು ೨೦೧೫–೧೬ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಬಿಡುಗಡೆಗೊಳಿಸಿದ ಅನುದಾನವು ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಲ್ಲದೇ ಇದ್ದಲ್ಲಿ, ಈ ಅನುದಾನದಿಂದ ಕೈಗೊಂಡಿರುವ ಯೋಜನೆಗಳಾವುವು ? (ವಿವರ ನೀಡುವುದು)

## ೨೦೧೪ ರಿಂದ ೨೦೧೬ರವರೆಗೂ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೩೩ (೧೫೮೮) ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೨೦೧೪–೧೫, ೨೦೧೫–೧೬ರ ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡ ನೂತನ ಯೋಜನೆಗಳು ಯಾವುವು ; ಯೋಜನೆಗಳಿಗೆ ಬಿಡುಗಡೆಗೊಂಡ ಅನುದಾನ ಎಷ್ಟು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರವಾಸಿಗರಿಗಾಗಿ ಗುರುತಿಸಿದ ಸ್ಥಳಗಳು ಯಾವುವು ; (ವಿವರ ಒದಗಿಸುವುದು)

(ಇ) ಮರೋಳಿಯಲ್ಲಿರುವ ಸೂರ್ಯನಾರಾಯಣ ದೇವಸ್ಥಾನವನ್ನು ನವೀಕೃತಗೊಳಿಸಿ, ದಕ್ಷಿಣ ಭಾರತದಲ್ಲಿ ಅತ್ಯಂತ ಪ್ರಮುಖವಾದ ದೇವಸ್ಥಾನವಾಗಿದ್ದು ಈ ದೇವಸ್ಥಾನವನ್ನು ಪ್ರವಾಸಿಗರ ಯಾತ್ರಾಸ್ಥಳವನ್ನಾಗಿ ಗುರುತಿಸಲು ಇಲಾಖೆ ಕ್ರಮ ಕೈಗೊಳ್ಳುವುದೇ;

(ಈ) ಪ್ರವಾಸೋದ್ಯಮ ಇಲಾಖೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಸಿ.ಆರ್.ಝಡ್ ನಿಯಮದಲ್ಲಿ ಸಡಿಲಿಕೆಯನ್ನು ನೀಡದೇ ಇರುವುದರಿಂದ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳು ಕುಂಠಿತವಾಗಿರುವುದು ನಿಜವೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ?

## KSAPS ಸಂಸ್ಥೆಯ ಏಡ್ಸ್ ನಿಯಂತ್ರಣ ಕಾರ್ಯಕ್ರಮಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೧೫೩೪ (೧೬೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) KSAPS ಪ್ರಾರಂಭವಾದಂದಿನಿಂದ ಇಲ್ಲಿಯವರೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರತಿ ವಾರ್ಷಿಕ ಬಜೆಟ್‌ನಲ್ಲಿ ಕಾಯ್ದಿರಿಸಿರುವ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಆ ಪೈಕಿ ಖರ್ಚಾದ ಹಣವೆಷ್ಟು ; (ವರ್ಷವಾರು ವಿವರ ನೀಡುವುದು) ಯಾವ ಉದ್ದೇಶ/ಕಾರಣ/ಕೆಲಸಗಳಿಗಾಗಿ ಈ ಹಣ ಖರ್ಚಾಗಿರುತ್ತದೆ ; ಶೀರ್ಷಿಕೆಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) KSAPS ನಲ್ಲಿ ಕೆಲಸ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿ ಎಷ್ಟು ; ಸದರಿ ಸಿಬ್ಬಂದಿಗಳಲ್ಲಿ ಖಾಯಂ ಮತ್ತು ಹೊರಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು ;

(ಈ) KSAPS ಸಂಸ್ಥೆಯ ಏಡ್ಸ್ ನಿಯಂತ್ರಣ ಕಾರ್ಯಕ್ರಮಗಳು ಶಾಶ್ವತವೇ/ಕಾಲಮಿತಿಗೊಳಪಟ್ಟಿವೆಯೇ ; ಕಾಲಮಿತಿಗೊಳಪಟ್ಟಿದ್ದಲ್ಲಿ, ಸದರಿ ಕಾರ್ಯಕ್ರಮಗಳು ಅಂತ್ಯಗೊಳ್ಳುವ/ಮುಕ್ತಾಯವಾಗುವ ಸಮಯ ಯಾವುದು ?

## HIV/ಏಡ್ಸ್ ಪೀಡಿತರು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೧೫೩೫ (೧೬೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಿಂದ ರಾಜ್ಯದಲ್ಲಿ ಏಡ್ಸ್ ಪೀಡಿತರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು) ಆ ಪೈಕಿ ಮೃತಪಟ್ಟವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ವೇಶ್ಯಾವಾಟಿಕೆಯಲ್ಲಿ ತೊಡಗಿಸಿಕೊಂಡಿರುವ ೧೮ ವರ್ಷಕ್ಕಿಂತ ಕಡಿಮೆ ವಯಸ್ಸಿನವರ ಸಂಖ್ಯೆ ಎಷ್ಟು ; ಜಿಲ್ಲಾವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು ; ಸದರಿ ವ್ಯಕ್ತಿಗಳಲ್ಲಿ HIV ಪೀಡಿತರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು) ಸದರಿ ವ್ಯಕ್ತಿಗಳ ಪುನರ್ವಸತಿಗಾಗಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು) ಸದರಿ ವ್ಯಕ್ತಿಗಳನ್ನು ಹೆಚ್ಚಿನ ಓದಿಗೆ ತೊಡಗಿಸಿಕೊಳ್ಳುವಂತೆ ಮಾಡಲು ಯಾವುದಾದರೂ ಕಾರ್ಯಕ್ರಮ ರೂಪಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ವೇಶ್ಯಾವಾಟಿಕೆಯಲ್ಲಿ ತೊಡಗಿಕೊಂಡಿರುವ ಪುರುಷರು/ತೃತೀಯ ಲಿಂಗಿಗಳು/ಲಿಂಗತ್ವ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು) ಇವರಲ್ಲಿ HIV ಪೀಡಿತರ ಸಂಖ್ಯೆ ಎಷ್ಟು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವದ ಅಭಾವ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೧೫೩೬ (೧೬೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವದ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಶುಚಿತ್ವ ಮತ್ತು ನೈರ್ಮಲ್ಯ ಕಾಪಾಡಲು ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಶುಚಿತ್ವ ಮತ್ತು ನೈರ್ಮಲ್ಯ ಕಾಪಾಡುವ ಜವಾಬ್ದಾರಿಯನ್ನು ಸರ್ಕಾರದಿಂದ ನೇಮಕವಾದ ಸಿಬ್ಬಂದಿ ನಿರ್ವಹಿಸುತ್ತಿದ್ದಾರೆಯೇ ಅಥವಾ ಹೊರಗುತ್ತಿಗೆ ನೀಡಲಾಗಿದೆಯೇ ;

(ಈ) ರಾಜ್ಯದ ತಾಲ್ಲೂಕು ಜಿಲ್ಲಾವಾರು ಇರುವ ಆಸ್ಪತ್ರೆಗಳ ವಿವರ ಹೆಸರು ಸಹಿತ ಮತ್ತು ಪ್ರತಿ ಆಸ್ಪತ್ರೆಯಲ್ಲಿ ಸದರಿ ಕೆಲಸಕ್ಕೆ ನಿಯೋಜನೆ/ನೇಮಕವಾದ ಸಿಬ್ಬಂದಿ (ಖಾಯಂ/ಹೊರಗುತ್ತಿಗೆ) ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ನಕಲಿ ವೈದ್ಯರ ಹಾವಳಿ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೧೫೩೭ (೧೬೩೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಕಲಿ ವೈದ್ಯರ ಹಾವಳಿಯಿಂದ ಜನಸಾಮಾನ್ಯರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ಹತ್ತು ವರ್ಷಗಳಿಂದ ಪತ್ತೆ ಹಚ್ಚಿರುವ ನಕಲಿ ವೈದ್ಯರ ಸಂಖ್ಯೆ ಎಷ್ಟು ; (ವರ್ಷಾವಾರು ವಿವರ ನೀಡುವುದು) ಹಾಗೂ ಸದರಿ ವೈದ್ಯರುಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಇ) ನಕಲಿ ವೈದ್ಯರ ಹಾವಳಿಯನ್ನು ಶಾಶ್ವತವಾಗಿ ಕೊನೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಷ್ಟ್ರೀಯ ಮಕ್ಕಳ ಕ್ರಿಯಾಯೋಜನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೫೩೮ (೧೫೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರವು ರಾಷ್ಟ್ರೀಯ ಮಕ್ಕಳ ಕ್ರಿಯಾ ಯೋಜನೆ ಕರಡನ್ನು ತಯಾರಿಸಿ ಸಾರ್ವಜನಿಕರ ಸಲಹೆಗಳನ್ನು ಆಹ್ವಾನಿಸಿದ್ದು ಇದೇ ರೀತಿ ರಾಜ್ಯ ಸರ್ಕಾರವು ಸಹ ಮಕ್ಕಳ ಹಕ್ಕುಗಳನ್ನು ಎತ್ತಿ ಹಿಡಿಯಲು ಈ ತರಹದ ಕ್ರಿಯಾ ಯೋಜನೆಯನ್ನು ರೂಪಿಸಲು ಯೋಚಿಸಿದೆಯೇ ;

(ಆ) ೨೦೧೦ರ ನಂತರ ಸರ್ಕಾರವು ರಾಜ್ಯದಲ್ಲಿ ಮಕ್ಕಳ ಕ್ರಿಯಾ ಯೋಜನೆಯನ್ನು ಹೊರ ತಂದಿದೆಯೇ ; ತರದಿದ್ದಲ್ಲಿ ಅದಕ್ಕೆ ಕಾರಣಗಳೇನು ;

(ಇ) ಈ ಕ್ರಿಯಾ ಯೋಜನೆಯನ್ನು ತರಲು ಉದ್ದೇಶಿಸಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು ?

## “ಸಬಲ” ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೫೩೮(ಎ) (೧೫೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹದಿಹರೆಯದ ಹೆಣ್ಣು ಮಕ್ಕಳಿಗೆ ಪೌಷ್ಠಿಕ ಆಹಾರವು ಬಹು ಮುಖ್ಯವಾಗಿದ್ದು, ಅದಕ್ಕಾಗಿ ಕೇಂದ್ರ ಸರ್ಕಾರವು ಶಾಲೆಯಿಂದ ಹೊರಗಿರುವ ಹದಿಹರೆಯದ ಹೆಣ್ಣು ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲು “ಸಬಲ” ಕಾರ್ಯಕ್ರಮವನ್ನು ಜಾರಿಗೆ ತಂದಿದ್ದು, ಅದನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ ಕಳೆದ ೩ ವರ್ಷಗಳಿಂದ ಎಷ್ಟು ಹದಿಹರೆಯದ ಹೆಣ್ಣು ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗಿದೆ ;

(ಇ) ಈ ಯೋಜನೆಗೆ ಕಳೆದ ೩ ವರ್ಷಗಳಿಂದ ಖರ್ಚು ಮಾಡಿರುವ ಹಣ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ನಡೆಸುತ್ತಿರುವ ಪದವಿ ಪೂರ್ವ ಕಾಲೇಜಿನ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೫೩೯ (೧೫೫೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸವಮಾಜ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ನಡೆಸುತ್ತಿರುವ ಪದವಿ ಪೂರ್ವ ಕಾಲೇಜುಗಳನ್ನು ಯಾವಾಗ ಸ್ಥಾಪನೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮೊರಾರ್ಜಿ ಪದವಿ ಪೂರ್ವ ಕಾಲೇಜುಗಳ ಸಿಬ್ಬಂದಿಗಳ ನೇಮಕಾತಿಗೆ ಅವಶ್ಯವಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಇ) ಈ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ತುಂಬಲಾಗಿದೆಯೇ ; (ವಿವರ ನೀಡುವುದು)

(ಈ) ಈ ಪದವಿ ಪೂರ್ವ ಕಾಲೇಜುಗಳಿಗೆ ಅಗತ್ಯವಿರುವ ಕಟ್ಟಡ, ಪೀಠೋಪಕರಣ, ಗ್ರಂಥಾಲಯ, ಪ್ರಯೋಗಾಲಯ, ವಸತಿ ನಿಲಯ ಹಾಗೂ ಸಿಬ್ಬಂದಿಗಳ ವಸತಿ ಗೃಹಗಳನ್ನು ನಿರ್ಮಿಸಲಾಗಿದೆಯೇ ? (ವಿವರ ನೀಡುವುದು)

## ವಿಶೇಷ ಸಾಮರ್ಥ್ಯವುಳ್ಳರಿಗೆ ನೀಡುವ ಸೌಲಭ್ಯಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೫೪೦ (೧೫೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಅಂಗವಿಕಲತೆಯಿಂದ ಬಳಲುತ್ತಿರುವ ವಿಶೇಷ ಸಾಮರ್ಥ್ಯ ಉಳ್ಳವರಿಗೆ ಸರ್ಕಾರ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಅಂಗವಿಕಲತೆವುಳ್ಳ ವ್ಯಕ್ತಿಗಳಿಗೆ ಮಾಸಿಕ ಅನುದಾನ ನೀಡಲು ಇರುವ ಮಾನದಂಡಗಳೇನು ; ಹಾಗೂ ಈ ಮಾನದಂಡ ಮತ್ತು ಅನುದಾನದ ಮೊತ್ತವನ್ನು ಎಂದು ನಿರ್ಧರಿಸಲಾಗಿದೆ ;

(ಇ) ಅಂಗವಿಕಲತೆ ಇರುವ ವ್ಯಕ್ತಿಗಳು ಯಾವ ಕುಟುಂಬದಲ್ಲಿ ಜನಿಸಿದ್ದರೂ ಅನ್ಯರ ಮೇಲೆ ಅವಲಂಬಿತರಾಗಿರುವ ಅವಶ್ಯಕತೆ ಇರುವುದರಿಂದ ಈ ವ್ಯಕ್ತಿಗಳಿಗೆ ನೀಡುವ ಸೌಲಭ್ಯಗಳನ್ನು ಒದಗಿಸಲು

ಇರುವ ಮಾನದಂಡಗಳನ್ನು ಪರಿಶೀಲಿಸುವಲ್ಲಿ ಕುಟುಂಬದ ಆದಾಯವನ್ನು ಪರಿಗಣಿಸದೆ ಇರುವ ಚಿಂತನೆ ಸರ್ಕಾರದ ಮುಂದಿದೆಯೇ ;

(ಈ) ವಿವಿಧ ನ್ಯೂನತೆಗಳಿರುವ ಈ ವ್ಯಕ್ತಿಗಳನ್ನು ಸರ್ವೆ ಮುಖಾಂತರ ಗುರುತಿಸಲಾಗಿದೆಯೇ ? (ಅಂಕಿ ಅಂಶಗಳ ಸಹಿತ ವಿವರ ನೀಡುವುದು)

## ರಾಜ್ಯದ ಮೊರಾರ್ಜಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ನೀಡುತ್ತಿರುವ ಸೇವಾ ಸೌಲಭ್ಯಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೧೫೪೧ (೧೫೫೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೊರಾರ್ಜಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ನೀಡಲಾಗುತ್ತಿರುವ ಸೇವಾ ಸೌಲಭ್ಯಗಳೇನು ; (ವಿವರ ನೀಡುವುದು)

(ಆ) ರಾಜ್ಯದ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ನೀಡುತ್ತಿರುವ ಸೇವಾ ಸೌಲಭ್ಯ ಮತ್ತು ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಮೊರಾರ್ಜಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ನೀಡುವ ಸೌಲಭ್ಯಗಳಲ್ಲಿ ತಾರತಮ್ಯಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿರುವ ಶಿಕ್ಷಕರಿಗೆ ನೀಡುವ ಸೇವಾ ಸೌಲಭ್ಯಗಳಲ್ಲಿ ಇರುವ ತಾರತಮ್ಯವನ್ನು ನಿವಾರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೪೨ (೧೫೬೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಜನಸಂಖ್ಯೆಯಲ್ಲಿ ಶೇ ೫೦ಕ್ಕಿಂತ ಹೆಚ್ಚಿರುವ ಹಿಂದುಳಿದ ವರ್ಗಗಳ ನೆರವಿಗಾಗಿ ಸರ್ಕಾರವು ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿಯಲ್ಲಿ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು ಬಿ.ಸಿ.ಎಂ. ಇಲಾಖೆಯಲ್ಲಿ ಖಾಯಂ ಅಧಿಕಾರಿಗಳಿಲ್ಲದೆ ಇರುವುದರಿಂದ ಯೋಜನೆಗಳನ್ನು ಸರಿಯಾಗಿ ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹಿಂದುಳಿದ ವರ್ಗಗಳ ಇಲಾಖೆಗೆ ಮಂಜೂರಾದ ಹುದ್ದೆಗಳು ಎಷ್ಟು ಆ ಪೈಕಿ ಖಾಯಾಂಯಾತಿ ಹುದ್ದೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಹುದ್ದೆವಾರು ವಿವರ ನೀಡುವುದು)

(ಇ) ಅನ್ಯ ಇಲಾಖೆಯಿಂದ ನಿಯೋಜಿಸಲ್ಪಟ್ಟ ಪ್ರಭಾರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ಅವು ಯಾವುವು ; (ಹುದ್ದೆವಾರು ವಿವರ ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ಬೆಳಗಾವಿ ಜಿಲ್ಲಾ ಆಸ್ಪತ್ರೆಯಲ್ಲಿ ಬಡ ರೋಗಿಗಳಿಗೆ ಚಿಕಿತ್ಸೆ ನೀಡುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೪೩ (೧೫೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲಾ ಆಸ್ಪತ್ರೆಯಲ್ಲಿ ಬಡ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಸಿಗದೆ ಬಡ ರೋಗಿಗಳು ಖಾಸಗಿ ಆಸ್ಪತ್ರೆಗೆ ತೆರಳುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜಿಲ್ಲಾ ಆಸ್ಪತ್ರೆಯ ಆಧುನೀಕರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಆಸ್ಪತ್ರೆಯಲ್ಲಿ ಸಿಬ್ಬಂದಿಯ ಕೊರತೆಯನ್ನು ನಿವಾರಿಸಲು ಸರ್ಕಾರವು ನೇಮಕಾತಿ ಪ್ರಕ್ರಿಯೆಯನ್ನು ಕೈಗೊಂಡಿದೆಯೇ ;

(ಈ) ಜಿಲ್ಲಾ ಆಸ್ಪತ್ರೆಯಲ್ಲಿ ರಕ್ತ ತಪಸಣಾ ಕೇಂದ್ರ ಮತ್ತು ಐ.ಸಿ.ಯು ಘಟಕಗಳು ಕಾರ್ಯ ನಿರ್ವಹಿಸದೆ ತುಕ್ಕು ಹಿಡಿದಿದ್ದು ಅವು ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ಆಧುನೀಕರಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ಸಾಕಾರಗೊಳ್ಳುವುದು ಯಾವಾಗ ?

## ಬಿ.ಪಿ.ಎಲ್. ಪಡಿತರ ಚೀಟಿದಾರರಿಗೆ ಆಧಾರ್ ಕಾರ್ಡ್ ಸಂಖ್ಯೆ ಕಡ್ಡಾಯ ಮಾಡಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೪೪ (೧೫೬೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯ ಸೌಲಭ್ಯ ಪಡೆಯುತ್ತಿರುವ ಬಿ.ಪಿ.ಎಲ್. ಪಡಿತರ ಚೀಟಿದಾರರಿಗೆ ಆಧಾರ್ ಕಾರ್ಡ್ ನಂಬರ್ ಕಡ್ಡಾಯದಿಂದ ಸಾರ್ವಜನಿಕರಲ್ಲಿ ಗೊಂದಲ ಉಂಟಾಗಿ ಕಾರ್ಡ್ ಕಳೆದುಕೊಳ್ಳುವ ಭೀತಿಯಲ್ಲಿ ಆತಂಕಕ್ಕೀಡಾಗಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆಧಾರ್ ಕಾರ್ಡ್ ಲಿಂಕ್ ಮಾಡಲು ಗಡುವು ವಿಸ್ತರಿಸುವ ವಿಚಾರ ಸರಕಾರದ ಮುಂದಿದೆಯೇ ;

(ಇ) ರಾಜ್ಯದಲ್ಲಿ ಆಧಾರ್ ಕಾರ್ಡ್ ಪಡೆದ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ;

(ಈ) ಆಧಾರ್ ಕಾರ್ಡ್ ಪಡೆಯದೇ ಇರುವ ಕುಟುಂಬಗಳ ಸಂಖ್ಯೆ ಎಷ್ಟು ;

(ಉ) ಅಂತಹ ಕುಟುಂಬಗಳಿಗೆ ತ್ವರಿತಗತಿಯಲ್ಲಿ ಆಧಾರ್ ಕಾರ್ಡ್‌ಗಳನ್ನು ವಿತರಿಸಲು ಸರಕಾರ ಕೈಗೊಂಡಿರುವ ಕ್ರಮಗಳೇನು ?

## ಅಪ್ರಾಪ್ತ ಬಾಲಕಿಯರ ಅಕ್ರಮ ಸಾಗಾಟ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೫೪೫ (೧೫೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅಪ್ರಾಪ್ತ ಬಾಲಕಿಯರನ್ನು ಹೊರ ರಾಜ್ಯಗಳಿಗೆ ಅಕ್ರಮವಾಗಿ ಸಾಗಾಟ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಹಾಗೂ ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಬಾಲಕಿಯರನ್ನು ಅಕ್ರಮವಾಗಿ ಸಾಗಿಸಿ ಮಾರಾಟ ಮಾಡಲಾಗಿದೆ ; ಅಧಿಕೃತವಾಗಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಎಷ್ಟು ಪ್ರಕರಣಗಳಲ್ಲಿ ಬಾಲಕಿಯರನ್ನು ರಕ್ಷಿಸಿ ಪಾಲಕರಿಗೆ ಒಪ್ಪಿಸಲಾಗಿದೆ ಕಳಂಕಿತ ಆರೋಪಿಗಳನ್ನು ಬಂಧಿಸಲಾಗಿದೆಯೇ ; ಹಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಬಾಲಕಿಯರ ಅಕ್ರಮ ಸಾಗಾಟ ದಂಧೆಯನ್ನು ಮುಂದಿನ ದಿನಗಳಲ್ಲಿ ನಡೆಯದಂತೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬೆಳಗಾವಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಕಾಮಗಾರಿಗಳ ಮಂದಗತಿಯಲ್ಲಿ ಸಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೪೬ (೧೫೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಒಳಚರಂಡಿ ಕಾಮಗಾರಿಯು ಮಂದಗತಿಯಲ್ಲಿ ಸಾಗಿರುವುದರಿಂದ ಆಸ್ಪತ್ರೆಯ ಆವರಣದಲ್ಲಿ ಬಡ ರೋಗಿಗಳಿಗೆ ನೀರಿನ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಆಸ್ಪತ್ರೆಯ ಆವರಣದಲ್ಲಿ ಒಳಚರಂಡಿ ಕಾಮಗಾರಿಗೆ ಸರ್ಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು ;

(ಇ) ಕಾಮಗಾರಿಯನ್ನು ಪ್ರಾರಂಭಿಸಿದ ದಿನಾಂಕ ಹಾಗೂ ಕಾಮಗಾರಿ ಮುಗಿಸಲು ವಿಧಿಸಿದ ಗಡುವು ಎಷ್ಟು ; ಈ ಕಾಮಗಾರಿಯ ವಿಳಂಬದಿಂದ ಜಿಲ್ಲಾ ಆಸ್ಪತ್ರೆಯಲ್ಲಿಯ ರೋಗಿಗಳಿಗೆ ಆಸ್ಪತ್ರೆಯ ಸಿಬ್ಬಂದಿಗೆ, ಬಿಮ್ಸ್ ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಅದಕ್ಕೆ ಸರ್ಕಾರವು ಯಾವ ಪರ್ಯಾಯ ಕ್ರಮ ಕೈಗೊಂಡಿದೆ ;

(ಈ) ಒಳಚರಂಡಿ ಕಾಮಗಾರಿಯು ಮಂದಗತಿಯಲ್ಲಿ ಸಾಗಲು ಕಾರಣಗಳೇನು ; ಈ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದೇ ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರಾಣ ರಕ್ಷಿತ ಔಷಧಿ ಲಭ್ಯತೆ ಬಗ್ಗೆ

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೪೭ (೧೬೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಲ್ಲಾ ರೋಗಕ್ಕೆ ಮತ್ತು ತುರ್ತು ಚಿಕಿತ್ಸೆಗೆ ಸಂಬಂಧಪಟ್ಟ ಔಷಧಿಗಳ ಲಭ್ಯವಿದೆಯೇ ;

(ಆ) ಹುಚ್ಚುನಾಯಿ ಕಡಿತ, ಹಾವು ಕಡಿತದಂತಹ ವಿಶೇಷ ಪ್ರಕರಣಗಳು ಗ್ರಾಮೀಣ ಪ್ರದೇಶದಲ್ಲಿ ನಡೆದಂತಹ ಸಂದರ್ಭದಲ್ಲಿ ಸದರಿ ಚಿಕಿತ್ಸೆಗೆ ಸರಿಯಾದ ಪ್ರಮಾಣದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಔಷಧಿ ಲಭ್ಯವಿದೆಯೇ ; (ತಾಲ್ಲೂಕುವಾರು ಔಷಧಿಗಳ ದಾಸ್ತಾನು ವಿವರ ಒದಗಿಸುವುದು)

(ಇ) ಹುಚ್ಚುನಾಯಿ ಕಡಿತ, ಹಾವು ಕಡಿತದಂತಹ ವಿಶೇಷ ಪ್ರಕರಣಗಳು ಗ್ರಾಮೀಣ ಪ್ರದೇಶದಲ್ಲಿ ನಡೆದಂತಹ ಸಂದರ್ಭದಲ್ಲಿ ಸದರಿ ಚಿಕಿತ್ಸೆಗೆ ಸರಿಯಾದ ಪ್ರಮಾಣದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಔಷಧಿ ಲಭ್ಯವಿಲ್ಲದೆ ಸಾವಿಗೀಡಾದ ಪ್ರಸಂಗಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಾಹಿತಿ

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೪೪ (೧೬೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆರೋಗ್ಯಾಧಿಕಾರಿಯು ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ ;

(ಈ) ರಾಜ್ಯದಲ್ಲಿ ಪ್ರಸ್ತುತವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ? (ವಿವರವಾದ ಮಾಹಿತಿ ನೀಡುವುದು)

# ಔಷಧಿಗಳ ಸರಬರಾಜು ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೫೪೯ (೧೬೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಡಿ ಬರುವ ಆಸ್ಪತ್ರೆಗಳಿಗೆ ಔಷಧಗಳನ್ನು ಮಾರುಕಟ್ಟೆಯಲ್ಲಿ ಕೊಂಡು ಸರಬರಾಜು ಮಾಡಲು ಯಾವ ಸಂಸ್ಥೆಗೆ ವಹಿಸಲಾಗಿದೆ ; (ವಿವರವಾದ ಮಾಹಿತಿ ಕೊಡುವುದು)

(ಆ) ೨೦೧೫–೧೬ನೇ ಸಾಲಿನಲ್ಲಿ ಸದರಿ ಸಂಸ್ಥೆಯು ಎಷ್ಟು ರೂ.ಗಳ ಔಷಧಗಳನ್ನು ಯಾವ ಯಾವ ಕಂಪನಿಗಳಿಂದ ಕೊಂಡುಕೊಳ್ಳಲಾಗಿದೆ ;

(ಇ) ಸಂಸ್ಥೆಯು ಔಷಧಿಗಳನ್ನು ಕೊಳ್ಳುವಾಗ ವಾಸ್ತವ ಮಾರುಕಟ್ಟೆ ದರಕ್ಕಿಂತ ಶೇಕಡಾ ಎಷ್ಟು ಹೆಚ್ಚಿನ ದರ ನಮೂದಿಸಿ ಕಂಪನಿಯಿಂದ ಖರೀದಿಸಲಾಗಿದೆ ;

(ಈ) ಇದರಿಂದ ಸರ್ಕಾರಕ್ಕೆ ಆದ ನಷ್ಟ ಎಷ್ಟು ;

(ಉ) ಈ ಸಂಬಂಧ ಸರ್ಕಾರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

# ಪಡಿತರ ಚೀಟಿ ಅರ್ಜಿ ಶುಲ್ಕ ಗ್ರಾಮ ಪಂಚಾಯತ್‌ಗೆ ನೀಡುವ ಬಗ್ಗೆ

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫೦ (೧೬೦೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್ ಕಛೇರಿಗಳಲ್ಲಿ ಪಡಿತರ ಚೀಟಿಗಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಸಂಗ್ರಹಿಸುವ ರೂ. ೫೦ ಮೊತ್ತವನ್ನು ಗ್ರಾಮ ಪಂಚಾಯತ್ ಉಪಯೋಗಿಸಲು ಆದೇಶ ಹೊರಡಿಸಲಾಗಿದೆಯೇ ; (ಪ್ರತಿ ಒದಗಿಸುವುದು)

(ಆ) ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಶೀಲ್ದಾರರು ಗ್ರಾಮ ಪಂಚಾಯತ್‌ಗಳಿಗೆ ನೋಟೀಸು ನೀಡಿ ಸದರಿ ಮೊತ್ತವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಲು ಸೂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಆಧಾರದ ಮೇಲೆ ಸದರಿ ನೋಟೀಸು ನೀಡಲಾಗುತ್ತಿದೇ ; (ತಾಲ್ಲೂಕುವಾರು ನೋಟೀಸು ನೀಡಿದ ವಿವರ ಒದಗಿಸುವುದು)

(ಇ) ಸರ್ಕಾರದ ಆದೇಶದ ಹೊರತಾಗಿಯೂ ತಾಲ್ಲೂಕು ಮಟ್ಟದಲ್ಲಿ ಈ ರೀತಿಯ ನೋಟೀಸು ನೀಡಿ ಗೊಂದಲ ಸೃಷ್ಟಿಸುತ್ತಿರುವುದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ವೈದ್ಯಕೀಯ ಸೀಟುಗಳ ಸಂಖ್ಯೆ ಮತ್ತು ಶುಲ್ಕದ ಬಗ್ಗೆ

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫೧ (೧೬೦೬) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿದ್ಯಾರ್ಥಿಗಳಿಗೆ ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಿರುವ ವೈದ್ಯಕೀಯ ಸೀಟುಗಳ ಸಂಖ್ಯೆ ಎಷ್ಟು ; ಸರ್ಕಾರಿ ಕೋಟಾದಡಿ ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಎಂ.ಬಿ.ಬಿ.ಎಸ್.ಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಶುಲ್ಕ ನಿಗದಿಪಡಿಸಲಾಗಿದೆಯೇ ; ಇಲ್ಲದಿದ್ದಲ್ಲಿ ನಿಗದಿಪಡಿಸಲಾಗುವುದು ಯಾವಾಗ ; (ವಿವರ ಒದಗಿಸುವುದು)

(ಇ) ರಾಜ್ಯದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಸೀಟುಗಳ ಲಭ್ಯತೆ ಹೆಚ್ಚಳಕ್ಕೆ ಹಾಗೂ ಹಿಂದುಳಿದ ಮತ್ತು ಬಡ ವಿದ್ಯಾರ್ಥಿಗಳ ಶುಲ್ಕದ ಹೊರೆ ಕಡಿಮೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ವಿವರ ಒದಗಿಸುವುದು)

## ತುರುವೇಕೆರೆ ತಾಲ್ಲೂಕಿನ ಆಶ್ರಮ ಶಾಲೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೫೫೨ (೧೫೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಆಶ್ರಮ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು ;

(ಆ) ಮಾಯಸಂದ್ರ ಹೋಬಳಿಯ ಹನುಮಾಪುರ ಆಶ್ರಮ ಶಾಲೆಗೆ ಕಟ್ಟಡ ನಿರ್ಮಾಣಕ್ಕಾಗಿ ಒದಗಿಸಲಾಗಿರುವ ಅನುದಾನ ಎಷ್ಟು ; ಯಾವ ಸಾಲಿನಲ್ಲಿ ಒದಗಿಸಲಾಗಿದೆ ;

(ಇ) ಸದರಿ ಶಾಲೆಯ ಕಟ್ಟಡ ಕಾಮಗಾರಿಯು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕಾರಣವೇನು ;

(ಈ) ಸದರಿ ಕಾಮಗಾರಿಗೆ ಸರ್ಕಾರ ಅನುದಾನ ಒದಗಿಸಲಾಗಿದ್ದರೂ ಸುಮಾರು ವರ್ಷಗಳಿಂದ ಈ ಕಾಮಗಾರಿ ನೆನೆಗುದಿಗೆ ಬಿದ್ದಿರಲು ಕಾರಣವೇನು ; ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಯಾವಾಗ ? (ವಿವರ ನೀಡುವುದು)

## ಸಾರ್ವಜನಿಕರಿಗೆ ಉಚಿತ ವೈ ಫೈ ಯೋಜನೆ ನೀಡುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೫೫೩ (೧೫೪೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೆಂಗಳೂರು ನಗರ ಹಾಗೂ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ವೈ ಫೈ ಒದಗಿಸಲು ಸರ್ಕಾರ ಮುಂದಾಗಿದೆಯೇ ; ಹಾಗಿದ್ದಲ್ಲಿ, ಯಾವಾಗಿನಿಂದ ಒದಗಿಸಲಾಗುವುದು ?

## ಶ್ರೀ ದೇವರ ದಾಸಿಮಯ್ಯನವರ ಜಯಂತಿ ಆಚರಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೫೫೪ (೧೫೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಧ್ಯವಚನಕಾರರಾದ ಶ್ರೀ ದೇವರ ದಾಸಿಮಯ್ಯನವರ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವನ್ನಾಗಿ ಎಂದಿನಿಂದ ಪ್ರಾರಂಭಿಸಲಾಗಿದೆ ;

(ಆ) ಸದರಿ ಕಾರ್ಯಕ್ರಮದ ಆಚರಣೆಯನ್ನು ಯಾವ ರೀತಿ ಎಲ್ಲಿ ಮತ್ತು ಯಾವಾಗ ಮಾಡಲಾಗುವುದು ;

(ಇ) ಸದರಿ ಕಾರ್ಯಕ್ರಮಕ್ಕಾಗಿ ಹಣ ಬಿಡುಗಡೆಯನ್ನು ಯಾವ ರೀತಿ ಮಾಡಲಾಗುತ್ತದೆ ;

(ಈ) ಕಳೆದ ಎರಡು ವರ್ಷಗಳಿಂದ ಅನೇಕ ತಾಲ್ಲೂಕು ಕಛೇರಿಗೆ ಹಣ ಬಾರದಿರಲು ಕಾರಣವೇನು ; ಎಲ್ಲೆಲ್ಲಿ ಬಂದಿರುವುದಿಲ್ಲ ; (ವಿವರ ಕೊಡುವುದು)

(ಉ) ಹಾಗಿದ್ದಲ್ಲಿ, ಆಚರಣೆ ಮಾಡಿರುವ ನೇಕಾರ ಸಮುದಾಯಗಳಿಗೆ ಯಾವಾಗ ಹಣ ನೀಡಲಾಗುವುದು ?

## ಕಿದ್ವಾಯಿ ಸಂಸ್ಥೆಯ ನೌಕರರ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೫೫ (೧೫೨೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಿದ್ವಾಯಿ ಸಂಸ್ಥೆ ಪ್ರಾರಂಭವಾಗಿದ್ದು ಯಾವಾಗ ;

(ಆ) ಕಿದ್ವಾಯಿ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ಗ್ರೂಪ್ 'ಎ' ಯಿಂದ ಗ್ರೂಪ್ 'ಡಿ' ವರೆಗೆ ಇರುವ ನೌಕರರೆಷ್ಟು ; ಅದರಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ನೌಕರರ ವಿವರವನ್ನು ನೀಡುವುದು ;

(ಇ) ಕಿದ್ವಾಯಿ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ಗ್ರೂಪ್ 'ಎ' ಯಿಂದ ಗ್ರೂಪ್ 'ಡಿ' (ಎಲ್ಲಾ ವೃಂದಗಳನ್ನು ಒಳಗೊಂಡಂತೆ) ಹುದ್ದೆಯುವರೆಗೆ ವಿವಿಧ ವೃಂದಗಳ ನೇಮಕಾತಿಯಲ್ಲಿ ಮೀಸಲಾತಿಯನ್ನು (ರೋಸ್ಟರ್) ಕಾಲಕಾಲಕ್ಕೆ ನಿಯಮಾನುಸಾರ ಅನುಸರಿಸಲಾಗುತ್ತಿದೆಯೇ ; ಅನುಸರಿಸದಿದ್ದಲ್ಲಿ ಕಾರಣವೇನು ;

(ಈ) ಹಾಗಿದ್ದಲ್ಲಿ, ನೇಮಕಾತಿಯ ಪ್ರವರ್ಗವಾರು ಪೂರ್ಣ ವಿವರಗಳನ್ನು ನೀಡುವುದು ?

## ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫೬ (೧೫೧೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳಿಗೆ ಸ್ವಂತ ಕಟ್ಟಡ ಹೊಂದುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಕುಂದಾಪುರ ತಾಲ್ಲೂಕಿನ ಕೋಟೇಶ್ವರ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾಗೇರಿಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಸ್ವಂತ ಕಟ್ಟಡ ಹೊಂದಲು ಸೂಕ್ತ ನಿವೇಶನ, ಕಾಮಗಾರಿಗೆ ಅನುದಾನ ಮಂಜೂರಾಗಿ ಹಲವು ವರ್ಷಗಳಾದರೂ ಇಲ್ಲಿಯವರೆಗೆ ಕಾಮಗಾರಿ ಪ್ರಾರಂಭಿಸದಿರಲು ಕಾರಣವೇನು ; ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಯಾವಾಗ ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿ ನಿಲಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೫೭ (೧೫೧೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿ ನಿಲಯಗಳಲ್ಲಿ ಕಾಮಗಾರಿ ಪ್ರಾರಂಭಗೊಂಡ ವಸತಿ ನಿಲಯಗಳು ಎಷ್ಟು ; ಅವು ಯಾವುವು ;

ಮುಕ್ತಯಗೊಂಡಿರುವ ಕಾಮಗಾರಿಗಳು ಎಷ್ಟು ; ಅವು ಯಾವುವು ; ಇನ್ನು ಪ್ರಾರಂಭವಾಗದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ನೂತನವಾಗಿ ಮಂಜೂರಾಗಿರುವ ಸರ್ಕಾರಿ ವಸತಿ ನಿಲಯಗಳಲ್ಲಿ ಸೂಕ್ತ ನಿವೇಶನವಿಲ್ಲದೆ ಇಲ್ಲಿಯವರೆಗೆ ಕಾಮಗಾರಿ ಪ್ರಾರಂಭಗೊಳ್ಳದ ಸರ್ಕಾರಿ ವಸತಿ ನಿಲಯಗಳು ಎಷ್ಟು ; ಅವು ಯಾವುವು ; ಇವುಗಳಿಗೆ ಸೂಕ್ತ ನಿವೇಶನವನ್ನು ಹೊಂದಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಮುದಾಯ ಭವನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೫೮ (೧೫೧೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಸರ್ಕಾರ ಮೀಸಲಿಟ್ಟ ಹಣ ಎಷ್ಟು ; (ಕಳೆದ ೩ ವರ್ಷಗಳ ವಿವರ ನೀಡುವುದು)

(ಆ) ಈ ಬಗ್ಗೆ ವಿವಿಧ ಸಮುದಾಯಗಳಿಂದ ಬಂದ ಮನವಿಗಳೆಷ್ಟು ; ಇದುವರೆವಿಗೂ ಭೌತಿಕವಾಗಿ ವಿಲೇ ಮಾಡಿದ ಮನವಿಗಳು ಎಷ್ಟು; ಉಳಿಕೆ ಎಷ್ಟು ; ಭೌತಿಕವಾಗಿ ಖರ್ಚು ಮಾಡಿದ ಹಣದ ಮೊಬಲಗು ಎಷ್ಟು ? (ಕಳೆದ ೩ ವರ್ಷಗಳ ವಿವರ ಸಲ್ಲಿಸುವುದು)

## ಭಾಗ್ಯಲಕ್ಷ್ಮಿ ಬಾಂಡ್ ವಿತರಣೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೪೫ (೧೫೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯನ್ನು ಅರ್ಹ ಹೆಣ್ಣು ಮಕ್ಕಳಿಗೆ ಜಾರಿ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷದಲ್ಲಿ ಭಾಗ್ಯಲಕ್ಷ್ಮಿ ಬಾಂಡನ್ನು ಪಡೆದ ಭೌತಿಕ ಫಲಾನುಭವಿಗಳ ಸಂಖ್ಯೆ ಎಷ್ಟು ; ಕಳೆದ ೩ ವರ್ಷದಲ್ಲಿ ಸರ್ಕಾರ ಮೀಸಲಿಟ್ಟ ಹಣ ಎಷ್ಟು ; ಖರ್ಚು ಮಾಡಿದ ಹಣ ಎಷ್ಟು ? (ವರ್ಷಾವಾರು ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಹಣ ಮಂಜೂರು ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೬೦ (೧೫೧೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸರ್ಕಾರ ಕಳೆದ ೩ ವರ್ಷದಲ್ಲಿ ವಿವಿಧ ಕಲ್ಯಾಣಕ್ಕೆ ಮಂಜೂರು ಮಾಡಿದ ಹಣ ಎಷ್ಟು ; (ವರ್ಷವಾರು ಮಾಹಿತಿ ಕೊಡುವುದು)

(ಆ) ಹಾಗಿದ್ದಲ್ಲಿ, ಅಂತಹ ಯೋಜನೆಗಳಿಗೆ ಭೌತಿಕವಾಗಿ ಖರ್ಚು ಮಾಡಿದ ಹಣ ಎಷ್ಟು ; ಫಲಾನುಭವಿಗಳಿಗೆ ಸಂಖ್ಯೆ ಎಷ್ಟು ? (೩ ವರ್ಷಗಳ ಯೋಜನಾವಾರು, ವರ್ಷಾವಾರು ಮಾಹಿತಿಯನ್ನು ನೀಡುವುದು)

# ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೬೧ (೧೬೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಇದುವರೆಗೆ ಎಷ್ಟು ಫಲಾನುಭವಿಗಳಿಗೆ ನೋಂದಣಿ ಮಾಡಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಆ) ಈ ಯೋಜನೆಯಲ್ಲಿ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳೇನು ;

(ಇ) ಈ ಯೋಜನೆಯ ಸೌಲಭ್ಯಗಳನ್ನು ಒದಗಿಸಲು ನೋಂದಾಯಿಸಲಾಗಿರಿಸಿರುವ ಆಸ್ಪತ್ರೆಗಳು ಯಾವುವು ಹಾಗೂ ಯಾವ ಯಾವ ಆಸ್ಪತ್ರೆಗಳಲ್ಲಿ ಎಷ್ಟು ಫಲಾನುಭವಿಗಳಿಗೆ ಚಿಕಿತ್ಸೆ ಒದಗಿಸಲಾಗಿದೆ ; (ಚಿಕ್ಕಮಗಳೂರು ಜಿಲ್ಲೆಯ ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು)

(ಈ) ಈ ಯೋಜನೆಯಲ್ಲಿ ನೋಂದಾಯಿಸಲಾಗಿಸಿರುವ ಆಸ್ಪತ್ರೆಗಳಲ್ಲಿ ಫಲಾನುಭವಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇಂತಹ ಆಸ್ಪತ್ರೆಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ಅಡುಗೆ ಅನಿಲ ಸಂಪರ್ಕವಿಲ್ಲದ ಕುಟುಂಬಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೬೨ (೧೬೨೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಡುಗೆ ಅನಿಲ ಸಂಪರ್ಕವಿಲ್ಲದ ಕುಟುಂಬಗಳ ಸಂಖ್ಯೆ ಎಷ್ಟು ; ಈಗಾಗಲೇ ಸಂಪರ್ಕ ಪಡೆದಿರುವ ಕುಟುಂಬಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇವುಗಳಲ್ಲಿ ಎ.ಪಿ.ಎಲ್. ಹಾಗೂ ಬಿ.ಪಿ.ಎಲ್. ಕುಟುಂಬಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಇ) ಅಡುಗೆ ಅನಿಲ ಸಂಪರ್ಕವಿಲ್ಲದ ಬಿ.ಪಿ.ಎಲ್. ಕುಟುಂಬಗಳಿಗೆ ಉಚಿತವಾಗಿ ಅಡುಗೆ ಅನಿಲ ಸಂಪರ್ಕ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಈ ಸೌಲಭ್ಯ ಪಡೆಯಲು ಸಾರ್ವಜನಿಕರು ಯಾರನ್ನು ಸಂಪರ್ಕಿಸಬೇಕು ಹಾಗೂ ಯಾವ ಯೋಜನೆಯಡಿಯಲ್ಲಿ ಯಾವಾಗ ಈ ಸೌಲಭ್ಯ ಕಲ್ಪಿಸಲಾಗುವುದು ? (ವಿವರ ಒದಗಿಸುವುದು)

# ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಏಕಲವ್ಯ ವಸತಿ ಶಾಲೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೬೩ (೧೬೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಏಕಲವ್ಯ ವಸತಿ ಶಾಲೆ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಶಾಲೆ ಹಾಗೂ ಕಾಲೇಜುಗಳಲ್ಲಿ ಶಿಕ್ಷಕರು, ಭೋಧಕರು ಹಾಗೂ ಇತರೆ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಯಾವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

# ತಂಬಾಕು ಉತ್ಪನ್ನಗಳ ನಿಷೇಧ ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೬೪ (೧೬೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಗಿಯುವ ತಂಬಾಕು ಉತ್ಪನ್ನಗಳಿಗೆ ಜನತೆ ಅದರಲ್ಲೂ ಯುವಜನತೆ ಹಾಗೂ ಮಹಿಳೆಯರು ಮಾರು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯದಲ್ಲಿ ಜಗಿಯುವ ತಂಬಾಕಿಗೆ ಮಾರು ಹೋಗಿರುವವರ ಪ್ರಮಾಣ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಜಗಿಯುವ ತಂಬಾಕು ಉತ್ಪನ್ನಗಳಿಗೆ ನಿಷೇಧ ಜಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯವನ್ನು ಹೊರತುಪಡಿಸಿ ದೇಶದಲ್ಲಿ ಯಾವ ಯಾವ ರಾಜ್ಯಗಳಲ್ಲಿ ಜಗಿಯುವ ತಂಬಾಕು ನಿಷೇಧದಲ್ಲಿದೆ ; ಹಾಗೇ ಯಾವ ಯಾವ ಜಗಿಯುವ ತಂಬಾಕುಗಳು ಮಾರಾಟದಲ್ಲಿವೆ ; (ಅವುಗಳ ಸಂಪೂರ್ಣ ವಿವರ ನೀಡುವುದು)

(ಈ) ಕೇಂದ್ರ ಸರ್ಕಾರವು ಈ ವಿಚಾರದಲ್ಲಿ ನೀಡಿರುವ ಸೂಚನೆ ಏನು ; ಸೂಚನೆ ನೀಡಿರುವುದು ಯಾವಾಗ ; ಕೇಂದ್ರ ಸರ್ಕಾರದ ಸೂಚನೆಯನ್ನು ರಾಜ್ಯದಲ್ಲಿ ಪಾಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಉ) ರಾಜ್ಯ ಸರ್ಕಾರವು ಜಗಿಯುವ ತಂಬಾಕಿನ ಉತ್ಪನ್ನಗಳ ನಿಷೇಧಕ್ಕೆ ಕ್ರಮ ಕೈಗೊಳ್ಳುವುದೇ ; ಹಾಗೇ ಈ ತಂಬಾಕುಗಳ ಜಾಹೀರಾತು (ಮುದ್ರಣ ಹಾಗೂ ದೃಷ್ಯ ಮಾಧ್ಯಮ) ನಿಷೇಧಕ್ಕೆ ಯಾವ ಕ್ರಮಕೈಗೊಳ್ಳಲಾಗಿದೆ ? (ವಿವರಗಳನ್ನು ನೀಡುವುದು)

## ಪ್ರತಿಷ್ಠಿತ ವೆಂಕಟಪ್ಪ ಕಲಾ ಗ್ಯಾಲರಿ ಪರಭಾರೆ ನೀಡಿರುವುದರ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೬೫ (೧೫೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರದ ಪ್ರತಿಷ್ಠಿತ ವೆಂಕಟಪ್ಪ ಕಲಾ ಗ್ಯಾಲರಿಯ ಪರಭಾರೆ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ನಿರ್ವಹಣೆ, ಉಸ್ತುವಾರಿ ನೆಪದಲ್ಲಿ ಬೇರೆ ಸಂಸ್ಥೆಗೆ, ಏಜೆನ್ಸಿಗಳಿಗೆ ನೀಡುತ್ತಿರುವ ಹುನ್ನಾರದ ಉದ್ದೇಶಗಳೇನು ;

(ಇ) ಈ ವಿವಾದವನ್ನು ರಾಜ್ಯ ಸರ್ಕಾರ ಯಾವ ರೀತಿ ನಿಭಾಯಿಸುತ್ತದೆ ; ದತ್ತು ನೀಡುವ ಪ್ರಸ್ತಾಪ ಮಂಡಿಸಿ ಸಾರ್ವಜನಿಕ ಕಲಾವಿದರು ಪ್ರತಿಭಟನೆ ಮಾಡಿದ ನಂತರ ಈ ಯೋಜನೆಯಿಂದ ಹಿಂದೆ ಸರಿಯಲು ಕಾರಣವೇನು ;

(ಈ) ಈ ರೀತಿಯ ಹಲವಾರು ವಿವಾದ–ಗೊಂದಲಗಳಿಗೆ ಕಾರಣರ್ಯಾರು ; ಇಂತಹವರುಗಳ ಮೇಲೆ ಸರ್ಕಾರದ ಕ್ರಮಗಳೇನು ;

(ಉ) ಸದರಿ ಕಲಾ ಗ್ಯಾಲರಿಗಳು ರಾಜ್ಯದಲ್ಲಿ ಎಲ್ಲೆಲ್ಲಿ ಅಸ್ತಿತ್ವದಲ್ಲಿವೆ, ಅವುಗಳ ನಿರ್ವಹಣೆ–ಸುಧಾರಣೆಗೆ ಯಾವ ಕ್ರಮಗಳನ್ನು ರಾಜ್ಯ ಸರ್ಕಾರ ಕೈಗೊಂಡಿದೆ ; ಇವುಗಳ ಅಭಿವೃದ್ಧಿಗೆ ಸರ್ಕಾರದ ಕಾರ್ಯಕ್ರಮ ಯೋಜನೆಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಗ್ರಾಮೀಣ ಕಡ್ಡಾಯ ವೈದ್ಯಕೀಯ ಸೇವಾ ತರಬೇತಿ ಕಾಯ್ದೆ ಅಸ್ತಿತ್ವದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೬೬ (೧೫೯೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮೀಣ ಕಡ್ಡಾಯ ವೈದ್ಯಕೀಯ ಸೇವಾ ಮತ್ತು ತರಬೇತಿ ಕಾಯ್ದೆ ಅಸ್ತಿತ್ವದಲ್ಲಿದೆಯೇ ; ಇದು ಪ್ರಾರಂಭವಾಗಿದ್ದು ಯಾವಾಗ ; (ವಿವರ ನೀಡುವುದು)

(ಆ) ಈ ಕಾಯ್ದೆ ಜಾರಿ ಕುರಿತು ಸರ್ಕಾರ ಆದೇಶ ಹೊರಡಿಸಿದೆಯೇ; ಹೊರಡಿಸಿದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು ;

(ಇ) ಈ ಕಾಯ್ದೆಗೆ ಉಚ್ಛ ನ್ಯಾಯಾಲಯವು ತಡೆಯಾಜ್ಞೆ ನೀಡಿದೆಯೇ ; ನೀಡಿದ್ದಲ್ಲಿ, ಯಾವಾಗ ; (ವಿವರ ಒದಗಿಸುವುದು)

(ಈ) ಹಾಗಿದ್ದಲ್ಲಿ, ತಡೆಯಾಜ್ಞೆ ತೆರವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿಶೇಷ ಘಟಕ ಮತ್ತು ಗಿರಿಜನ ಯೋಜನೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೬೭ (೧೫೯೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ರಿಂದ ೨೦೧೬–೧೭ನೇ ಸಾಲಿನವರೆಗೆ ಸಮಾಜ ಕಲ್ಯಾಣ ಇಲಾಖೆಗೆ ವಿಶೇಷ ಘಟಕ ಯೋಜನೆಯ ಗಿರಿಜನ ಉಪಯೋಜನೆಯಡಿಯಲ್ಲಿ ಒಟ್ಟು ಹಂಚಿಕೆಯಾದ ಅನುದಾನವೆಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಹಂಚಿಕೆಯಾದ ಅನುದಾನದಲ್ಲಿ ಖರ್ಚು ಮಾಡಿರುವ ಹಾಗೂ ಉಳಿಕೆಯಾದ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅನುದಾನ ಉಳಿಕೆಯಾಗಿದ್ದಲ್ಲಿ, ಕಾರಣಗಳೇನು ? (ಸ್ಪಷ್ಟ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಕೋಳಿ ಜ್ವರ ತಡೆಗಟ್ಟಲು ಮುಂಜಾಗ್ರತಾ ಕ್ರಮಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೬೮ (೧೫೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇತ್ತೀಚೆಗೆ ಕೋಳಿ ಜ್ವರ ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಜಿಲ್ಲಾವಾರು ವರದಿ ನೀಡುವುದು ;

(ಆ) ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು: (ವಿವರ ನೀಡುವುದು)

(ಇ) ಕೋಳಿ ಜ್ವರ ಸಮಸ್ಯೆಯಿಂದ ಆ ಉದ್ಯಮಕ್ಕೆ ಉಂಟಾಗಿರುವ ನಷ್ಟವೆಷ್ಟು ; ಈ ರೋಗ ಯಾವ ಭಾಗದಿಂದ ಹರಡಿದೆ ಎಂದು ತಪಾಸಣೆಯಿಂದ ಕಂಡು ಬಂದಿದೆಯೇ ; ಕಂಡು ಬಂದಿದ್ದಲ್ಲಿ, ಸ್ಪಷ್ಟ ಮಾಹಿತಿಯನ್ನು ನೀಡುವುದು ;

(ಈ) ಸದರಿ ರೋಗವನ್ನು ತಡೆಗಟ್ಟಲು ಹಾಗೂ ಬೇರೆಡೆಗೆ ಹರಡದಂತೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ; ಈ ರೋಗ ನಿವಾರಣೆಗಾಗಿ ಎಷ್ಟು ಕೋಳಿಗಳನ್ನು ನಾಶಪಡಿಸಲಾಗಿರುತ್ತದೆ ; ಕೋಳಿ ನಾಶಗೊಂಡ ಪೌಲ್ಟ್ರಿಫಾರಂನವರಿಗೆ ನಷ್ಟದ ಪರಿಹಾರವನ್ನು ಸರ್ಕಾರ ನೀಡಿದೆಯೇ ; ಪರಿಹಾರ ಮೊತ್ತದ ಸಂಪೂರ್ಣ ವಿವರವನ್ನು ತಾಲ್ಲೂಕುವಾರು ಹಾಗೂ ಫಾರಂಗಳ ಹೆಸರು ವಿಳಾಸಗಳೊಂದಿಗೆ ನೀಡುವುದು ;

(ಉ) ಕುಕ್ಕುಟ ಉದ್ಯಮವನ್ನು ಅಭಿವೃದ್ಧಿಪಡಿಸಲು ಸಂಕಷ್ಟ ಉಂಟಾದ ಸಂದರ್ಭದಲ್ಲಿ ಕೋಳಿ ಸಾಗಾಟಗಾರರಿಗೆ ಸೂಕ್ತ ಪರಿಹಾರವನ್ನು ಒದಗಿಸಲು ಸರ್ಕಾರ ಬದ್ಧವಾಗಿದೆಯೇ ; ಪರಿಹಾರ ಮೊತ್ತದ ಮಾರ್ಗಸೂಚಿಯನ್ನು ನೀಡುವುದು ?

## ಕನಿಷ್ಠ ಬೆಲೆ ಯೋಜನೆಯಡಿ ಪಡಿತರಗಳ ಖರೀದಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೫೪೯ (೧೬೦೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಷ್ಟು ಬೆಂಬಲ ಬೆಲೆಗೆ ಎಷ್ಟು

ಪ್ರಮಾಣದ ರಾಗಿ, ಅಕ್ಕಿ ಮೊದಲಾದ ಪಡಿತರಗಳನ್ನು ಖರೀದಿ ಮಾಡಲಾಗಿದೆ ; (ವಿವರ ನೀಡುವುದು) ಖರೀದಿ ಮಾಡಿದ ಪಡಿತರಗಳ ಖರೀದಿ ಹಣ ಪಾವತಿ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಬಾಕಿ ಇರುವ ಮೊತ್ತ ಎಷ್ಟು ;

(ಆ) ರೈತರಿಗೆ ಪಡಿತರವನ್ನು ತರುವ ಗೋಣಿ ಚೀಲದ ಹಣವನ್ನು ನೀಡಲಾಗುತ್ತದೆಯೇ ; ನಿಜವಾಗಿದ್ದಲ್ಲಿ, ರೈತರ ಗೋಣಿ ಚೀಲಕ್ಕೆ ಎಷ್ಟು ಹಣ ನೀಡಲಾಗುತ್ತದೆ ?

## ಪ್ರಾಚ್ಯವಸ್ತು ಇಲಾಖೆಗೆ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೫೭೦ (೧೬೦೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಸಾಲಿನಿಂದ ಇಲ್ಲಿಯವರೆಗೆ ರಾಜ್ಯ ಪ್ರಾಚ್ಯವಸ್ತು ಹಾಗೂ ಪುರಾತತ್ವ ಇಲಾಖೆಗೆ ಬಿಡುಗಡೆಯಾಗಿರುವ ಮೊತ್ತವೆಷ್ಟು ;

(ಆ) ಇದರಲ್ಲಿ ಎಷ್ಟು ಹಣವನ್ನು ಇದುವರೆಗೆ ಬಳಸಿಕೊಳ್ಳಲಾಗಿದೆ ; ಉಳಿಕೆಯಾಗಿರುವ ಹಣವೆಷ್ಟು, ಸರ್ಕಾರಕ್ಕೆ ವಾಪಸ್ಸು ಹೋಗಿರುವ ಹಣವೆಷ್ಟು ;

(ಇ) ಕೆ.ವೆಂಕಟಪ್ಪ ಕಲಾ ಗ್ಯಾಲರಿಗೆ ೨೦೧೪–೧೫ ರಿಂದ ಮಾಡಿರುವ ಅಭಿವೃದ್ಧಿ ಕೆಲಸಗಳ ವಿವರ ನೀಡುವುದು ;

(ಈ) ಸದರಿ ಗ್ಯಾಲರಿಯ ಅಭಿವೃದ್ಧಿಗೆ ಇನ್ನೂ ಎಷ್ಟು ಹಣದ ಅವಶ್ಯಕತೆ ಇದೆ ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಆಯೋಗದ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೫೭೧ (೧೬೦೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹಿಂದುಳಿದ ವರ್ಗಗಳ ಆಯೋಗ ೧೪ ವರ್ಷಗಳ ಲೆಕ್ಕ ಪರಿಶೋಧನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿಲ್ಲದಿರುವುದು ನಿಜವೇ ; (ವಿವರ ನೀಡುವುದು)

(ಆ) ಸದರಿ ಆಯೋಗದಿಂದ ಲೆಕ್ಕ ಪರಿಶೋಧನಾ ವರದಿ ಸಲ್ಲಿಸದಿರುವ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಇ) ಇದುವರೆಗೂ ವರದಿಯನ್ನು ಸಲ್ಲಿಸದಿರಲು ಕಾರಣವೇನು ; ಯಾವಾಗ ಸಲ್ಲಿಸಲಾಗುವುದು ?

## ಪಡಿತರ ಚೀಟಿಗಾಗಿ ಬಂದಿರುವ ಅರ್ಜಿಗಳ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೫೭೨ (೧೬೦೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಹೊಸ ಪಡಿತರ ಚೀಟಿಗಾಗಿ ಎಷ್ಟು ಕುಟುಂಬಗಳಿಂದ ಅರ್ಜಿಗಳು ಸಲ್ಲಿಕೆಯಾಗಿವೆ ; (ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಸಲ್ಲಿಕೆಯಾದ ಅರ್ಜಿಗಳಲ್ಲಿ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ; (ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ವಿವರ ನೀಡುವುದು)

(ಇ) ಪಡಿತರ ಚೀಟಿ ವಿತರಣೆಯಲ್ಲಿ ಕಳೆದ ಮೂರು ವರ್ಷಗಳಿಂದಲೂ ವಿಳಂಬವಾಗಿರುವುದು ನಿಜವೇ ;

(ಈ) ಈ ರೀತಿ ವಿಳಂಬವಾಗಲು ಕಾರಣವೇನು ; ತ್ವರಿತಗೊಳಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಪಡಿತರ ದಾಸ್ತಾನು ಮಾಡಲು ಇರುವ ಗೋದಮುಗಳ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೫೭೩ (೧೬೦೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಡಿತರ ದಾಸ್ತಾನು ಮಾಡಲು ಇರುವ ಒಟ್ಟು ಗೋದಾಮುಗಳ ಸಂಖ್ಯೆ ಎಷ್ಟು ; ಅವು ಯಾವುವು ; ಇವುಗಳಲ್ಲಿ ದಾಸ್ತಾನಿಗೆ ಯೋಗ್ಯವಾಗಿರುವ ಗೋದಾಮುಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇಲಿ, ಹೆಗ್ಗಣ ಹಾಗೂ ಮಳೆ ನೀರಿನಿಂದಾಗಿ ಕಳೆದ ಮೂರು ವರ್ಷಗಳಿಂದ ಪಡಿತರ ಹಾಳಾಗಿರುವ ನಷ್ಟದ ಪ್ರಮಾಣ ಹಾಗೂ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಎಷ್ಟು ಗೋದಾಮುಗಳ ದುರಸ್ಥಿ ಕಾರ್ಯ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಗೋದಾಮುಗಳ ಸಮರ್ಪಕ ದುರಸ್ಥಿಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಉಂಟಾಗಿರುವ ಡೆಂಗ್ಯೂ ಜ್ವರ/ ಚಿಕನ್ ಗುನ್ಯಾ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೭೪ (೧೫೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡೆಂಗ್ಯೂ ಜ್ವರ ಹಾಗೂ ಚಿಕನ್ ಗುನ್ಯಾ ಹರಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಹರಡಿದೆ ; ಜಿಲ್ಲಾವಾರು ಹಾಗೂ ಹಾವೇರಿ ಜಿಲ್ಲೆಯಲ್ಲಿ ತಾಲ್ಲೂಕುವಾರು ವಿವರ ನೀಡುವುದು ;

(ಇ) ರಾಜ್ಯದಲ್ಲಿ ಹಲವಾರು ಜಿಲ್ಲೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಹಾಗೂ ರೋಗಿಗಳಿಗೆ ಹಾಸಿಗೆ ವ್ಯವಸ್ಥೆ ಇಲ್ಲದಿರುವುದರಿಂದ ನೆಲದ ಮೇಲೆ ಮಲಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಇದ್ದಲ್ಲಿ, ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿನ ಹಾಸ್ಟೆಲ್‌ಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೭೫ (೧೫೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹಾಸ್ಟೆಲ್‌ಗಳಿವೆ ; ಅವುಗಳಲ್ಲಿ ಸರ್ಕಾರಿ ಹಾಗೂ ಸರ್ಕಾರದ ಅನುದಾನದಲ್ಲಿ ಮತ್ತು ಖಾಸಗಿಯಾಗಿ ನಡೆಯುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು, ಹಾಸ್ಟೆಲ್‌ವಾರು ಮಾಹಿತಿ ನೀಡುವುದು)

(ಆ) ಪ್ರತಿ ಹಾಸ್ಟೆಲ್‌ಗಳಿಗೆ ಯಾವ ಯಾವ ಯೋಜನೆಯಲ್ಲಿ ಎಷ್ಟೆಷ್ಟು ಹಣ ಮಂಜೂರು ಮಾಡಲಾಗಿದೆ ; ಯಾವ ಯಾವ ಕಾಮಗಾರಿಗಳಿಗೆ ಮಂಜೂರು ಮಾಡಲಾಗಿದೆ ?

## ಮಾರಣಾಂತಿಕ ಖಾಯಿಲೆಯ ರೋಗಿಗಳಿಗೆ ಚಿಕಿತ್ಸೆಯಲ್ಲಿ ರಿಯಾಯಿತಿ ನೀಡುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೭೬ (೧೬೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ / ಅರೆ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗಾಗಿ ಬರುವ ರೋಗಿಗಳು ಭರಿಸುವ ಹಣಕ್ಕೆ ಪರಿಹಾರವಾಗಿ ಸರ್ಕಾರ ರೂಪಿಸಿರುವ ಹೊಸ ಯೋಜನೆಗಳಾವುವು ;

(ಆ) ಈ ಯೋಜನೆಗಳಲ್ಲಿ ಯಾವ ರೀತಿ ಖಾಯಿಲೆಗಳಿಗೆ ಚಿಕಿತ್ಸೆ ಪಡೆಯಲು ಅವಕಾಶವಿರುತ್ತದೆ ;

(ಇ) ಕ್ಯಾನ್ಸರ್ ಹಾಗೂ ಇತರೆ ಮಾರಣಾಂತಿಕ ಖಾಯಿಲೆಗಳಿಗೆ ಬಡ ರೋಗಿಗಳಿಗೆ ನೀಡುವ ಚಿಕಿತ್ಸೆಯಲ್ಲಿ ರಿಯಾಯಿತಿ ನೀಡಲಾಗುವುದೇ ;

(ಈ) ಹಾಗಿದ್ದಲ್ಲಿ, ಎಷ್ಟು ರಿಯಾಯಿತಿ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

# ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೭ (೧೫೨೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಆರು ಜಿಲ್ಲೆಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಿಂದ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಯಾವ ಯಾವ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿದೆ ? (ಕಾಮಗಾರಿವಾರು ಅನುದಾನದ ವಿವರ ನೀಡುವುದು)

# ಬೀದರ್ ಜಿಲ್ಲೆ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೮ (೧೫೨೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಸರ್ಕಾರಿ ಕಟ್ಟಡದಲ್ಲಿ ನಡೆಯುತ್ತಿವೆ ;

(ಆ) ಬೀದರ್ ಜಿಲ್ಲೆಯ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಜಿಲ್ಲಾಡಳಿತದ ವತಿಯಿಂದ ನಿವೇಶನ ಒದಗಿಸುವ ಕುರಿತು ಪ್ರಸ್ತಾವ ಬಂದಿದೆಯೇ ;

(ಇ) ಬಂದಿದ್ದರೆ, ಈ ನಿವೇಶನಗಳನ್ನು ಯಾವಾಗ ಮಂಜೂರು ಮಾಡಲಾಗುವುದು ;

(ಈ) ಬೀದರ್ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿಗಳು ಖಾಸಗಿ ಕಟ್ಟಡದಲ್ಲಿ ನಡೆಯುತ್ತಿವೆ ; ಖಾಸಗಿ ಕಟ್ಟಡಗಳಿಗೆ ನೀಡುತ್ತಿರುವ ಬಾಡಿಗೆ ಮೊತ್ತ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭೯ (೧೫೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಇತರೆ ಸಿಬ್ಬಂದಿಗಳಿಲ್ಲದೇ ಸಾರ್ವಜನಿಕರಿಗೆ ಮುಖ್ಯವಾಗಿ ಗ್ರಾಮಾಂತರ ಪ್ರದೇಶದ ರೋಗಿಗಳಿಗೆ ತೀವ್ರ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರು/ಶುಶ್ರೂಷಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೧೫–೧೬ರವರೆಗೆ ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆ, ವಿವಿಧ ಔಷಧಿಗಳ ಹಾಗೂ ವೈದ್ಯಕೀಯ ಸಲಕರಣೆಗಳ ಖರೀದಿಗಾಗಿ ಖರ್ಚು ಮಾಡಿದ ಹಣವೆಷ್ಟು ? (ಪ್ರಾಥಮಿಕ ಆರೋಗ್ಯ ಕೇಂದ್ರವಾರು/ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

## ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೦ (೧೬೧೬) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ;

(ಇ) ಕಳೆದ ೨ ವರ್ಷಗಳಿಂದ ವೈದ್ಯಕೀಯ ಶಿಕ್ಷಣ ಇಲಾಖೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಿರುವ ಅನುದಾನವೆಷ್ಟು ;

(ಈ) ಪ್ರಸಕ್ತ ಸಾಲಿನಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ತೀರ್ಮಾನಿಸಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು ?

## ಬಿ.ಪಿ.ಎಲ್. ಕಾರ್ಡ್ ವಿತರಣೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೧ (೧೬೧೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ರಾಜ್ಯದ ಬಡ–ಕಡುಬಡವರಿಗೆ ವಿತರಣೆ ಮಾಡಿರುವ ಬಿ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು ;

(ಆ) ಪ್ರತಿ ಕಾರ್ಡ್‌ಗೆ ನೀಡುತ್ತಿರುವ ಆಹಾರ ಧಾನ್ಯದ ಪ್ರಮಾಣವೆಷ್ಟು ;

(ಇ) ಕಳೆದ ೬ ತಿಂಗಳಿಂದ ಬಿ.ಪಿ.ಎಲ್ ಕಾರ್ಡ್ ಹಂಚಿಕೆ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೨ (೧೬೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿರುವ ವಿವಿಧ ಯೋಜನೆಗಳಾವುವು ;

(ಆ) ಸದರಿ ಯೋಜನೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ವಾರ್ತಾ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಎಷ್ಟು ವರ್ಷಗಳಿಂದ ಈ ಹುದ್ದೆಗಳು ಖಾಲಿ ಇವೆ ; (ಹುದ್ದೆವಾರು ವಿವರ ನೀಡುವುದು)

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೮೩ (೧೬೧೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಮಹಿಳೆಯರ ಮತ್ತು ಮಕ್ಕಳ ಕಲ್ಯಾಣಕ್ಕೆ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳಾವುವು ;

(ಆ) ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಗಳಿಗೆ ವೆಚ್ಚ ಮಾಡಿರುವ ಅನುದಾನವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೪ (೧೫೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಈ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರು ಮತ್ತು ಶುಶ್ರೂಷಕರ ಹುದ್ದೆಗಳ ಸಂಖ್ಯೆಯೆಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಜಿಲ್ಲೆಯಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲು ಗುರುತಿಸಲಾಗಿರುವ ಸ್ಥಳಗಳಾವುವು ?

## ಬಳ್ಳಾರಿ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮೫ (೧೫೧೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಾದ್ಯಂತ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆಯೆಷ್ಟು ;

(ಆ) ಈ ಪೈಕಿ ಎಷ್ಟು ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳನ್ನು ಹೊಂದಿದೆ ;

(ಇ) ೨೦೧೬–೧೭ನೇ ಸಾಲಿನ ಆಯವ್ಯಯದಲ್ಲಿ ನೂತನ ಅಂಗನವಾಡಿ ಕೇಂದ್ರಗಳ ಕಟ್ಟಡವನ್ನು ನಿರ್ಮಿಸಲು ನಿಗದಿಪಡಿಸಿರುವ ಅನುದಾನವೆಷ್ಟು ; ಇಲ್ಲಿಯವರೆಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಡೆಂಗ್ಯೂ ಜ್ವರದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೮೬ (೧೫೮೧) ಮಾನ್ಯ ಆರೋಗ್ಯ ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಪ್ರಸಕ್ತ ವರ್ಷದಲ್ಲಿ ವರದಿಯಾಗಿರುವ ಡೆಂಗ್ಯೂ ಜ್ವರದ ಪ್ರಕರಣಗಳು ಎಷ್ಟು ; ಮೈಸೂರು ನಗರ, ಚಾಮರಾಜನಗರ ಪಟ್ಟಣಗಳು ಸೇರಿದಂತೆ ತಾಲ್ಲೂಕುಗಳ ಬಗ್ಗೆ ಪ್ರತ್ಯೇಕ ವಿವರ ನೀಡುವುದು ;

(ಆ) ಈ ಜ್ವರಪೀಡಿತ ರೋಗಿಗಳಿಗೆ ಸೂಕ್ತ ಚಿಕಿತ್ಸಾ ಸೌಲಭ್ಯ ಕಲ್ಪಿಸಲಾಗಿದೆಯೇ ; ಉಚಿತ ಔಷಧಿಗಳನ್ನು ಸಾಕಷ್ಟು ಸರಬರಾಜು ಮಾಡಿ ವಿತರಣೆ ಮಾಡಲಾಗುತ್ತಿದೆಯೇ ;

(ಇ) ಈ ರೋಗವು ಹರಡದಂತೆ ತಡೆಗಟ್ಟಲು ಪೌರ ಸಂಸ್ಥೆಗಳು ಮತ್ತು ಪಂಚಾಯತ್ ರಾಜ್ಯ ಸಂಸ್ಥೆಗಳ ಸಹಯೋಗದಲ್ಲಿ ರೋಗನಿರೋಧಕ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ ? (ವಿವರ ಒದಗಿಸುವುದು)

## ದಿ: ದೇವರಾಜ ಅರಸರ ಜನ್ಮ ಸ್ಥಳ ಬೆಟ್ಟದತುಂಗ, ಕಲ್ಲಹಳ್ಳಿಯನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೮೭ (೧೫೮೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿ: ದೇವರಾಜ ಅರಸು ರವರ ಜನ್ಮ ಸ್ಥಳ ಬೆಟ್ಟದತುಂಗ ಮತ್ತು ಕರ್ಮಭೂಮಿ ಕಲ್ಲಹಳ್ಳಿಯನ್ನು ದತ್ತು ತೆಗೆದುಕೊಂಡು ಅಭಿವೃದ್ಧಿ ಪಡಿಸುವ ಬಗ್ಗೆ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿದೆಯೇ ;

(ಆ) ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; ಅಭಿವೃದ್ಧಿ ಯೋಜನೆಯ ರೂಪುರೇಷೆಗಳೇನು ? (ವಿವರಗಳನ್ನು ಒದಗಿಸುವುದು)

## ಪ್ರವಾಸಿ ತಾಣಗಳಾದ ಮುತ್ತತ್ತಿ, ಶಿವನಸಮುದ್ರ , ಶ್ರೀರಂಗಪಟ್ಟಣ ನದಿಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೫೮೮ (೧೫೭೯) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದ ಜಲ ಮೂಲದ ಪ್ರವಾಸಿ ತಾಣಗಳಾದ ಮುತ್ತತ್ತಿ, ಶಿವನಸಮುದ್ರ (ಗಗನಚುಕ್ಕಿ, ಭರಚುಕ್ಕಿ)

ತಲಕಾಡು, ಶ್ರೀರಂಗಪಟ್ಟಣದ ಸಂಗಮ, ಬಲಮುರಿ, ತಲಕಾಡು ಇಲ್ಲಿ ಆಕಸ್ಮಿಕವಾಗಿ ನದಿ ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ಪ್ರವಾಸಿಗರು ಮತ್ತು ಯಾತ್ರಾರ್ಥಿಗಳ ಸಂಖ್ಯೆ ಎಷ್ಟು ; (ಪ್ರತಿಯೊಂದು ತಾಣದ ವರ್ಷಾವಾರು ವಿವರ ಒದಗಿಸುವುದು)

(ಆ) ಈ ಪ್ರವಾಸಿ ತಾಣಗಳಲ್ಲಿ ಯಾತ್ರಿಕರ ಮತ್ತು ಪ್ರವಾಸಿಗಳ ರಕ್ಷಣೆಗೆ ನೈಲಾನ್ ಹಗ್ಗ, ದೋಣಿ, ನುರಿತ ಈಜುಗಾರರು, ಸೆಕ್ಯೂರಿಟಿ ವ್ಯವಸ್ಥೆ, ಎಚ್ಚರಿಕೆ ಫಲಕಗಳು (ಹಿಂದಿ, ಇಂಗ್ಲಿಷ್, ಕನ್ನಡ ಭಾಷೆಗಳಲ್ಲಿ) ಇವುಗಳನ್ನು ಹಾಕಲು ಕ್ರಮ ಕೈಗೊಳ್ಳಲಾಗಿದೆಯೇ ; ಇದಕ್ಕಾಗಿ ಮಾಡಿರುವ ವೆಚ್ಚ ಎಷ್ಟು ; ಯಾವ ಯಾವ ಸೌಲಭ್ಯ ಒದಗಿಸಲಾಗಿದೆ ;

(ಇ) ಈ ತಾಣಗಳಲ್ಲಿ ನದಿಯ ಪಾತ್ರದಲ್ಲಿ ಸುರಕ್ಷಿತ ದೂರದಲ್ಲಿ ಕಬ್ಬಿಣದ ಗರ್ಡರ್‌ಗಳನ್ನು ನೆಟ್ಟು, ಸರಪಳಿಗಳನ್ನು ಕೂಡಿಸಿ, ಬ್ಯಾರಿಕೇಡ್‌ಗಳನ್ನು ನಿರ್ಮಿಸಿ ಅಲ್ಲಿಂದ ಮುಂದಕ್ಕೆ ಪ್ರವಾಸಿಗರು ಹೋಗದಂತೆ ಕ್ರಮ ತೆಗೆದುಕೊಳ್ಳಲಾಗುವುದೆ ; ಬಲಮುರಿ ಅಣೆಕಟ್ಟೆಯ ಮೇಲೆ ಪ್ರವಾಸಿಗರು ಓಡಾಡುವುದರಿಂದ ಅದರ ಎರಡೂ ಕಡೆ ಕಬ್ಬಿಣದ ಬಾರ್‌ಗಳ ಕಟ್ಟಕಟ್ಟೆ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೆ ?

## ಎನ್ ಪಿ ಎಸ್ ಪಿಂಚಣಿ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೫೭೮ (೧೬೩೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಸಂಸ್ಥೆಯಲ್ಲಿ ಹಾಲಿ ಎಷ್ಟು ಜನ ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ; ಸದರಿ ನೌಕರರಿಗೆ ಎನ್.ಪಿ.ಎಸ್. ಪಿಂಚಣಿ ಯೋಜನೆಯನ್ನು ಯಾವಾಗಿನಿಂದ ಜಾರಿಗೊಳಿಸಲಾಗಿದೆ ;

(ಆ) ಎನ್.ಪಿ.ಎಸ್. ಪಿಂಚಣಿ ಯೋಜನೆಯಡಿ ಹಣವನ್ನು ನೌಕರರಿಂದ ಪಡೆದುಕೊಂಡು ಮತ್ತು ಸಂಸ್ಥೆಯ ವಂತಿಕೆಯನ್ನು ಹಾಕಿ ಇಲ್ಲಿಯವರೆಗೆ ಯಾವುದೇ ಯೋಜನೆ ಅಡಿಯಲ್ಲಿ ಹೂಡಿಕೆ ಮಾಡದೆ ಇರುವುದು ನಿಜವೇ ; ಹಾಗಿದ್ದಲ್ಲಿ, ನೌಕರರಿಗೆ ಯಾವ ರೀತಿ ಪಿಂಚಣಿ ನೀಡಲಾಗುವುದು ;

(ಇ) ಇಲ್ಲಿಯವರೆಗೂ ಎಷ್ಟು ಪಿಂಚಣಿ ವಂತಿಗೆ ಹಣವನ್ನು ಸಂಸ್ಥೆಯು ಯಾವ ಬ್ಯಾಂಕಿನಲ್ಲಿ ಯಾವ ಖಾತೆಯಲ್ಲಿ ಇಟ್ಟಿದೆ ? (ಬ್ಯಾಂಕಿನ ಹೆಸರು, ಖಾತೆ ಸಂಖ್ಯೆ, ಇಟ್ಟಿರುವ ಹಣದ ವಿವರ ನೀಡುವುದು) (ಬ್ಯಾಂಕ್ ಪಾಸ್ ಪುಸ್ತಕದ ನಕಲು ಪ್ರತಿ ನೀಡುವುದು)

## ಪೋಸ್ಟ್ ಪೇಯ್ಡ್ ಟ್ಯಾಕ್ಸಿ ಸೇವೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೫೫೦ (೧೬೩೫) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ KSTDC, ನಿಗಮದ ವತಿಯಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪೋಸ್ಟ್ ಪೇಯ್ಡ್ ಟ್ಯಾಕ್ಸಿ ಸೇವೆಯನ್ನು ಯಾವಾಗಿನಿಂದ ಆರಂಭಿಸಲಾಯಿತು ; ಹಾಗೂ ಯಾವ ಯೋಜನೆಯಡಿ ಆರಂಭಿಸಲಾಗಿದೆ ;

(ಆ) ಹಾಲಿ ಎಷ್ಟು ಟ್ಯಾಕ್ಸಿಗಳಿಗೆ ಅನುಮತಿ ನೀಡಲಾಗಿದೆ, ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಈವರೆವಿಗೂ ನಿರ್ವಹಿಸದೇ ಇರುವ ಟ್ಯಾಕ್ಸಿಗಳ ಸಂಖ್ಯೆ ಎಷ್ಟು ; ಇದರ ಸಂಬಂಧ ದಾಖಲೆ ಇಡಲಾಗಿದೆಯೇ ; (ಟ್ಯಾಕ್ಸಿ ಮಾಲೀಕರ ಹೆಸರು ಹಾಗೂ ನೋಂದಣಿ ಸಂಖ್ಯೆಯೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಒಂದು ಟ್ಯಾಕ್ಸಿ ದಿನ ಒಂದಕ್ಕೆ KSTDC, ನಿಗಮಕ್ಕೆ ನೀಡಬೇಕಾದ ಶುಲ್ಕ ಎಷ್ಟು, ವಿವರವಾಗಿ ಪಾರ್ಕಿಂಗ್ ಚಾರ್ಜ್, ಕಾಲ್ ಸೆಂಟರ್ ಚಾರ್ಜ್, ಸರ್ವೀಸ್ ಚಾರ್ಜ್, ಇತರೆಗಳೊಂದಿಗೆ ಮಾಹಿತಿ ನೀಡುವುದು ;

(ಈ) KSTDC, ಕಾಲ್ ಸೆಂಟರ್ ಎಲ್ಲಿದೆ, ತಿಂಗಳಿಗೆ ಇದಕ್ಕೆ ನೀಡುತ್ತಿರುವ ಹಣ ಎಷ್ಟು, ಇದರಿಂದ ಟ್ಯಾಕ್ಸಿ ಚಾಲಕರಿಗೆ ಯಾವ ಪ್ರಯೋಜನವಾಗಿದೆ ?

**ಶ್ರೀನಿವಾಸ್**

ಕಾರ್ಯದರ್ಶಿ (I/c)

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ.0–048/800 ಪ್ರತಿಗಳು/28–06–2016